ಸಂಪುಟ : 10 ಸಂಚಿಕೆ: 211 ಪುಟ : 4+2 ಬೆಲೆ: 3.00 ಮಂಗಳವಾರ ಸೆಪ್ಟೆಂಬರ್ 30 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 211 Pages : 4+2 Price : 3.00 Tuesday September 30 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಸಚಿವ ಎಚ್.ಕೆ. ಪಾಟೀಲರಿಂದ ಬೆಳೆ ಹಾನಿ ಸಮೀಕ್ಷೆ, ಜನತಾ ದರ್ಶನ, ಪ್ರಗತಿ ಪರಿಶೀಲನಾ ಸಭೆ

# 121.33 ಕೋಟಿ ರೂ ಪರಿಹಾರಕ್ಕೆ ಪ್ರಸ್ತಾವನೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ ಬೆಳೆ ಹಾನಿಯಾಗಿದ್ದರ ಕುರಿತು ಈಗಾಗಲೇ ಜಂಟಿ ಸಮೀಕ್ಷೆ ಕಾರ್ಯ ನಡೆಸಲಾಗಿದೆ. ಕೃಷಿ ಇಲಾಖೆಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಒಟ್ಟಾರೆ 1,12,438 ಹೆಕ್ಟೇರ್ ಪ್ರದೇಶ ಬೆಳೆ ಹಾನಿಯಾಗಿದೆ. ಎನ್.ಡಿ.ಆರ್.ಎಫ್ ಪ್ರಕಾರ 121.33 ಕೋಟಿ ರೂ ಪರಿಹಾರ ನೀಡಲು ಪ್ರಸ್ತಾವನೆ ಸಿದ್ಧಪಡಿಸಲಾಗಿದ್ದು ಶೀಘ್ರವೇ ಸರಕಾರಕ್ಕೆ ಸಲ್ಲಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಬೆಳೆ ಹಾನಿ ಸಮೀಕ್ಷೆ ಹಾಗೂ ಜನತಾ ದರ್ಶನ, ಪ್ರಗತಿ ಪರಿಶೀಲನಾ ಸಭೆ ಜರುಗಿಸಿ ನಂತರ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ತೋಟಗಾರಿಕೆ ಇಲಾಖೆಗೆ ಸಂಬಂಧಿಸಿದಂತೆ 11,348 ಹೆಕ್ಟೇರ್ ಪ್ರದೇಶ ತೋಟಗಾರಿಕೆ ಬೆಳೆ ಹಾನಿಯಾಗಿದೆ. ಎನ್.ಡಿ.ಆರ್.ಎಫ್ ಪ್ರಕಾರ 10.36 ಕೋಟಿ ರೂ ಪರಿಹಾರಕ್ಕಾಗಿ ಪ್ರಸ್ತಾವನೆ ಸಿದ್ಧಪಡಿಸಲಾಗಿದೆ. ಕೃಷಿ ಬೆಳೆ ಹಾನಿಗೆ ಸಂಬಂಧಿಸಿದಂತೆ 4337 ರೈತರಿಂದ ಆಕ್ಷೇಪಣೆಗಳು ಸಲ್ಲಿಕೆಯಾಗಿವೆ. ಅವುಗಳನ್ನು ಪರಿಶೀಲಿಸಿ ವರದಿಯಲ್ಲಿ ಅಳವಡಿಸಲಾಗುವುದು. ಕೃಷಿಗೆ ಸಂಬಂಧಿಸಿದಂತೆ 4.36 ಕೋಟಿ ರೂ ಹಾಗೂ ತೋಟಗಾರಿಕೆ ಸಂಬಂಧಿಸಿದಂತೆ ಹೆಚ್ಚುವರಿಯಾಗಿ 1 ಕೋಟಿ ರೂ. ಪರಿಹಾರ ನೀಡಲು ಪ್ರಸ್ತಾವನೆಯಲ್ಲಿ ಸೇರಿಸಿ ಸಲ್ಲಿಸಲಾಗುವುದು ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

ಜನತಾ ದರ್ಶನ : ಜನರ ಸಮಸ್ಯೆಗಳಿಗೆ ಸ್ಥಳದಲ್ಲೇ



ಪರಿಹಾರ ಕಲ್ಪಿಸುವ ಮಹಾತ್ವಾಕಾಂಕ್ಷಿ ಜನತಾ ದರ್ಶನ ಕಾರ್ಯಕ್ರಮ ಪರಿಣಾಮಕಾರಿಯಾಗಿ ಜರುಗಿಸಲಾಗಿದೆ. ಜನತಾ ದರ್ಶನದಲ್ಲಿ ಸ್ವೀಕೃತವಾದ ಅರ್ಜಿಗಳ ಶೀಘ್ರ ವಿಲೇವಾರಿಗೆ ಕ್ರಮ ವಹಿಸಲು ಸೂಚಿಸಲಾಗಿದೆ. ಜನತಾ ದರ್ಶನದಲ್ಲಿ ವಿಲೇವಾರಿಯಾಗದ ಅರ್ಜಿಗಳಲ್ಲಿ ಕೆಲವೊಂದು ಅರ್ಜಿಗಳು ಅನುದಾನದ ಲಭ್ಯತೆ ಇಲ್ಲದೇ ವಿಲೇವಾರಿಯಾಗಿರುವುದಿಲ್ಲ. ಸಂಬಂಧಿತ ಇಲಾಖೆಯ ಅಧಿಕಾರಿಗಳು ಮೇಲಾಧಿಕಾರಿಗಳೊಂದಿಗೆ ಸಂಪರ್ಕಿಸಿ ಅನುದಾನ ತರಿಸಿಕೊಂಡು ಅರ್ಜಿ ವಿಲೇವಾರಿಗೆ ಕ್ರಮ ವಹಿಸಬೇಕು. ಇನ್ನು ಕೆಲವು ಅರ್ಜಿಗಳ ವಿಲೇವಾರಿಗಾಗಿ ಆಯ್ಕೆ ಸಮಿತಿ ಸಭೆಗಳನ್ನು ಮಾಡಬೇಕಾಗಿದೆ. ಹೀಗೆ ವಿವಿಧ ಹಂತದಲ್ಲಿ ಬಾಕಿ ಇರುವ ಅರ್ಜಿಗಳನ್ನು ಇಲಾಖೆ ಅಧಿಕಾರಿಗಳು ಅಕ್ಟೋಬರ್ 10ರೊಳಗಾಗಿ ವಿಲೇವಾರಿ ಮಾಡಿ ಜಿಲ್ಲಾಧಿಕಾರಿಗಳಿಗೆ ವರದಿ ಸಲ್ಲಿಸಲು ತಿಳಿಸಲಾಗಿದೆ ಎಂದರು. ಪ್ರಭುವಿನೆಡೆಗೆ ಪ್ರಭುತ್ವ: ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮದಲ್ಲಿ ಒಟ್ಟು 21 ದೂರು ದಾಖಲಾಗಿವೆ. 13 ದೂರುಗಳಿಗೆ ಸಂಪೂರ್ಣ ಪರಿಹಾರ ಒದಗಿಸಲಾಗಿದೆ. 2 ಮನವಿಗಳು ಯೋಜನೆ ಅಳವಡಿಕೆ ಕುರಿತಂತೆ ಹಾಗೂ 5 ಅರ್ಜಿಗಳು ಬಾಕಿ ಇವೆ. ಬಾಕಿ ಇರುವ ದೂರುಗಳ ಕುರಿತು ಶೀಘ್ರ ಕ್ರಮ ವಹಿಸಲು ಸೂಚಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಜಿಲ್ಲೆಯಲ್ಲಿ 17,997 ಅನರ್ಹರಿಗೆ ಪಿಂಚಣಿ ಮಂಜೂರಾತಿ ಆಗಿರುವುದು ತಿಳಿದು ಬಂದಿದ್ದು, ಇದರ ಸತ್ಯಾಸತ್ಯತೆಗಾಗಿ ಸಂಪೂರ್ಣ ತನಿಖೆಗೆ ಸೂಚಿಸಲಾಗಿದೆ. ಅನರ್ಹರಿಗೆ ವಿತರಣೆಯಾಗುತ್ತಿರುವ ಪಿಂಚಣಿ ಹಣ ತಕ್ಷಣ ನಿಲ್ಲಿಸಬೇಕೆಂದು ಈಗಾಗಲೇ ಸೂಚನೆ ನೀಡಲಾಗಿದೆ. ಜಿಲ್ಲಾಧಿಕಾರಿಗಳು ಈ ಕುರಿತು ಸಾಕಷ್ಟು ವಿಚಾರಣೆ ನಡೆಸಿ ಅನರ್ಹರಿಗೆ ಕೊಡುವಂತಹ ಸೌಲಭ್ಯ ನಿಲ್ಲಿಸುವ ಕುರಿತು ಇಲಾಖೆಯ ಕಾರ್ಯದರ್ಶಿಗಳಿಗೆ ಪತ್ರ ಬರೆದಿದ್ದಾರೆ ಎಂದು ಹೇಳಿದರು.ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾದಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಇದ್ದರು.

### ಅಮಾನತು

ಗದಗ ತಹಸೀಲ್ದಾರರ ಕಚೇರಿಯಲ್ಲಿ ಸಂಧ್ಯಾ ಸುರಕ್ಷಾ, ವಿಧವಾ ವೇತನ, ವೃದ್ಧಾಪ್ಯ ವೇತನ ಕುರಿತಂತೆ ಸಾಮಾಜಿಕ ಭದ್ರತಾ ಯೋಜನೆಗಳಡಿ ಅನರ್ಹರಿಗೆ ಮಂಜೂರಾತಿ ಆರೋಪದಡಿ ಉಪ ತಹಸೀಲ್ದಾರ ಡಿ.ಟಿ. ವಾಲ್ಮೀಕಿ ಅವರನ್ನು ಅಮಾನತುಗೊಳಿಸಿ ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿದ್ದಾರೆ. ಸಾರ್ವಜನಿಕರಿಂದ ದೂರು ಬಂದ ಹಿನ್ನೆಲೆಯಲ್ಲಿ ಇಂದು ನಾನೇ ಖುದ್ದಾಗಿ ಕಚೇರಿಗೆ ಹೋಗಿ ಪರಿಶೀಲನೆ ನಡೆಸಲಾಗಿ, ಅನರ್ಹರಿಗೆ ಪಿಂಚಣಿ ಮಂಜೂರು ಮಾಡಿರುವ ಕುರಿತು ಕಂಡುಬಂದ ಹಿನ್ನೆಲೆಯಲ್ಲಿ ಅಮಾನತ್ತು ಕ್ರಮ ವಹಿಸಲಾಗಿದೆ ಎಂದು ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

## ಸಾಮೂಹಿಕ ವಿವಾಹದಿಂದ ಆರ್ಥಿಕ ಹೊರೆ ಇಳಿಕೆ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಾಮೂಹಿಕ ವಿವಾಹದಿಂದ ಆರ್ಥಿಕ ಹೊರೆ ಇಳಿಸಲು ಸಾಧ್ಯವಾಗುತ್ತದೆ ಎಂದು ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ ಹೇಳೀದರು.

ಅವರು ಪಟ್ಟಣ ಸಮಿಪದ ಸೊರಟೂರ ಗ್ರಾಮದಲ್ಲಿ ದಸರಾ ಉತ್ಸವದ ನಿಮಿತ್ತ ಆದಿಶಕ್ತಿ ವಿವಿಧೋದ್ದೇಶ ಟ್ರಸ್ಟ್ ಹಾಗೂ ಸದ್ಭಕ್ತಿ ಮಂಡಳಿಯಿಂದ 11 ಜೋಡಿ ಉಚಿತ ಸಾಮೂಹಿಕ ವಿವಾಹ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿ, ಶಿವಾನಂದ ಮಾದಣ್ಣವರು ಬಡತನದಲ್ಲಿ ಬೆಳೆದಿದ್ದು, ಬಡವರ ಬದುಕು ಹಸನಾಗಲಿ ಎಂಬ ಉದ್ದೇಶದಿಂದ ಉಚಿತ ಸಾಮೂಹಿಕ ವಿವಾಹ ನೆರವೇರಿಸಿರುವುದು ಶ್ಲಾಘನೀಯ. ಮದುವೆಯ ದುಂದುವೆಚ್ಚಕ್ಕೆ ಕಡಿವಾಣ ಹಾಕಲು, ಬಡವರ ಆರ್ಥಿಕ ಹೊರೆಯನ್ನು ಇಳಿಸಲು ಈ ಸಾಮೂಹಿಕ ವಿವಾಹ ಸಹಕಾರಿಯಾಗಿದೆ ಎಂದರು.

ತಾ.ಪಂ ಮಾಜಿ ಅಧ್ಯಕ್ಷ ಬಿ.ಆರ್. ದೇವರೆಡ್ಡಿ, ಶಿದ್ದಲಿಂಗೇಶ ಪಾಟೀಲ್, ಅಶೋಕ ಮಂದಾಲಿ, ಶಿವಾನಂದ ಮಾದಣ್ಣವರ, ಮಾಹಾದೇವಪ್ಪ ಮಾದಣ್ಣವರ ಮುಂತಾದವರು ಇದ್ದರು.




ಗದಗ ನಗರದ ಮುಳಗುಂದನಾಕಾ ಬಳಿಯ ಶ್ರೀ ಅಡವೀಂದ್ರಸ್ವಾಮಿ ಮಠದ ಆವರಣದಲ್ಲಿ ದಸರಾ ಮಹೋತ್ಸವ ಮತ್ತು ಶ್ರೀದೇವಿ ಪುರಾಣ ಪ್ರವಚನ ಕಾರ್ಯಕ್ರಮದಲ್ಲಿ ರವಿವಾರ ಗದಗ ಮೆಡಿಕಲ್ ಕಾಲೇಜಿನ ಅಸೋಸಿಯೇಟ್ ಪ್ರೊಫೆಸರ್ ಡಾ. ವೀರೇಶ ದ್ಯಾವಣ್ಣವರ ಹಾಗೂ ಡಾ. ಅಭಿಷೇಕ ವಿ.ಹೊಸಳ್ಳಿಮಠ ಅವರ ತಂಡದವರಿಂದ ಉಚಿತ ಆರೋಗ್ಯ ತಪಾಸಣೆ ಹಾಗೂ ಚಿಕಿತ್ಸಾ ಶಿಬಿರ ಜರುಗಿತು. ನೂರಾರು ಜನರು ಆರೊಗ್ಯ ತಪಾಸಣೆ ಮಾಡಿಸಿಕೊಂಡು ಸಲಹೆ ಹಾಗೂ ಚಿಕಿತ್ಸೆ ಪಡೆದರು.

## ದಸರಾ ಹಬ್ಬಕ್ಕೆ ಸರ್ಕಾರಿ ರಜೆ ನೀಡದ ಖಾಸಗಿ ಶಾಲೆಗಳ ವಿರುದ್ಧ ಪ್ರತಿಭಟನೆ

# ಸರ್ಕಾರಿ ಆದೇಶಗಳ ಉಲ್ಲಂಘನೆಗೆ ಖಂಡನೆ

■ವಿಜಯಸಾಕ್ಷಿ ಸುದ್ದಿ, ಗದಗ

ದಸರಾ ಹಬ್ಬಕ್ಕೆ ಪ್ರತಿ ವರ್ಷ ಸರ್ಕಾರಿ ರಜೆ ಘೋಷಿಸಲಾಗುತ್ತದೆ. ಆದರೆ, ಗದಗ ನಗರದಲ್ಲಿರುವ ಕೆಲವು ಖಾಸಗಿ ಶಾಲೆಗಳು ರಜೆ ಘೋಷಿಸದೇ ಸರ್ಕಾರಿ ಆದೇಶ ಗಾಳಿಗೆ ತೂರಿದ ಆರೋಪದ ಹಿನ್ನೆಲೆಯಲ್ಲಿ ಶಿವರಾಮಕೃಷ್ಣ ಸೇವಾ ಸಮಿತಿಯ ಪದಾಧಿಕಾರಿಗಳು ನಗರದಲ್ಲಿ ಪ್ರತಿಭಟನೆ ನಡೆಸಿದರು.

ಈ ಬಗ್ಗೆ ಶಾಲಾ ಆಡಳಿತ ಮಂಡಳಿಯವರನ್ನು ಪ್ರಶ್ನಿಸಿದಾಗ ಸಮಿತಿ ಕಾರ್ಯಕರ್ತರಿಗೆ ಜಾತಿ ನಿಂದನೆ ಮಾಡಿ, ಸುಳ್ಳು ಪ್ರಕರಣ ದಾಖಲಿಸಿ ಜೈಲಿಗೆ ಅಟ್ಟುವ ಕೆಲಸ ಮಾಡಿದ್ದಾರೆ ಎಂದು ಆರೋಪಿಸಿ ಮುಳುಗುಂದ ನಾಕಾದಿಂದ ಜಿಲ್ಲಾಧಿಕಾರಿ ಕಚೇರಿಯವರೆಗೆ ಪಾದಯಾತ್ರೆಯ ಮೂಲಕ ತೆರಳಿ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ರಾಜು ಖಾನಪ್ಪನವರ, ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ ಅಂಬೇಡ್ಕರ ಇಡೀ ವಿಶ್ವಕ್ಕೆ ಮಾದರಿಯಾಗುವ ಸಂವಿಧಾನವನ್ನು ರಚಿಸಿ ದೇಶಕ್ಕೆ ನೀಡಿದ್ದಾರೆ. ಭಾರತದಲ್ಲಿರುವ ಎಲ್ಲ ಜಾತಿ, ಧರ್ಮದ ಜನತೆ ಸಂವಿಧಾನದಡಿಯಲ್ಲಿಯೇ ಕಾರ್ಯನಿರ್ವಹಿಸಬೇಕು ಎಂದು ಕಡ್ಡಾಯಗೊಳಿಸಲಾಗಿದೆ. ದೇಶದಲ್ಲಿರುವ ಎಲ್ಲ ಶಾಲೆ,



ಕಾಲೇಜು, ಸರಕಾರಿ, ಅರೆ ಸರಕಾರಿ ಕಚೇರಿಗಳಲ್ಲಿ ಅಂಬೇಡ್ಕರರ ಭಾವಚಿತ್ರ ಅಳವಡಿಸುವದನ್ನು ಕಡ್ಡಾಯಗೊಳಿಸಿದೆ.

ಅಲ್ಪಸಂಖ್ಯಾತರ ಶಾಲೆಯ ಹೆಸರಿನಲ್ಲಿ ಸರಕಾರಿ ಸೌಲಭ್ಯಗಳನ್ನು ಪಡೆಯುತ್ತಿರುವ ನಗರದ ಲೋಯಲಾ ಕಾನ್ವೆಂಟ್, ಸೇಂಟ್ ಜೋನ್ಸ್ ಶಾಲೆಗಳಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರರ ಭಾವಚಿತ್ರಗಳನ್ನು ಅಳವಡಿಸಿಲ್ಲ. ಈ ಬಗ್ಗೆ ಪ್ರಶ್ನಿಸಿದ ದಲಿತ ಸಂಘಟನೆಗಳ ಸದಸ್ಯರೊಂದಿಗೆ ಪ್ರಿನ್ಸಿಪಾಲ್ ಮತ್ತು ಇತರೆ ಸಿಬ್ಬಂದಿ ಕೆಟ್ಟದಾಗಿ ನಡೆದುಕೊಂಡಿದ್ದಾರೆ. ಭಾವಚಿತ್ರ ಅಳವಡಿಸದ ಬಗ್ಗೆ ಪ್ರಶ್ನಿಸಿದ ಜನರಿಗೆ ಚಪ್ಪಲಿಯಿಂದ ಹೊಡೆದು ಜಾತಿ ನಿಂದನೆ ಮಾಡಿದ್ದಾರೆ ಎಂದು ಗಂಭೀರವಾಗಿ ಆರೋಪಿಸಿದರು.

ಪ್ರಕರಣಕ್ಕೆ ಸಂಬಂಧಿಸಿ, ಶಾಲೆಗಳ ಆಡಳಿತ ಮಂಡಳಿ, ಮುಖ್ಯ ಶಿಕ್ಷಕರು ಪ್ರಶ್ನಿಸಿದವರ ಮೇಲೆಯೇ ಬೆಟಗೇರಿ ಪೊಲೀಸ್ ಠಾಣೆಯಲ್ಲಿ ಶಾಲೆಯಲ್ಲಿ ದೊಂಬಿ ನಿರ್ಮಿಸಿದ್ದಾರೆಂಬ ಸುಳ್ಳು ಪ್ರಕರಣ ದಾಖಲಿಸಿದ್ದಾರೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಟಗೇರಿ ಪೊಲೀಸರು 6 ಜನರನ್ನು ಬಂಧಿಸಿದ್ದಾರೆ.

> ಶಾಲಾ ಆಡಳಿತ ಮಂಡಳಿಯವರು ಸರ್ಕಾರಿ ಆದೇಶ ಗಾಳಿಗೆ ತೂರಿದ್ದನ್ನು ಪ್ರಶ್ನಿಸಿದಾಗ ನಮ್ಮ ಕಾರ್ಯಕರ್ತರ ಮೇಲೆಯೇ ಜಾತಿ ನಿಂದನೆ ಮಾಡಿದ್ದಾರೆ. ಈ ಬಗ್ಗೆ ಬೆಟಗೇರಿ ಠಾಣೆಯಲ್ಲಿ ದೂರು ದಾಖಲಿಸಿದರೂ ಬಂಧಿಸುವ ಕೆಲಸ ಆಗಿಲ್ಲ. ಆದರೆ, ಆಡಳಿತ ಮಂಡಳಿಯವರ ಸುಳ್ಳು ದೂರು ದಾಖಲಿಸಿಕೊಂಡು ನಮ್ಮ ಕಾರ್ಯಕರ್ತರನ್ನು ಬಂಧಿಸಿ ಪೊಲೀಸರು ಒಂದು ಕಣ್ಣಿಗೆ ಬೆಣ್ಣೆ-ಮತ್ತೊಂದು ಕಣ್ಣಿಗೆ ಸುಣ್ಣ ಎರಚುವ ಕೆಲಸ ಮಾಡಿದ್ದಾರೆ.
>
> **- ರಾಜು ಖಾನಪ್ಪನವರ.**
> **ಅಧ್ಯಕ್ಷರು, ಶಿವರಾಮಕೃಷ್ಣ ಸೇವಾ ಸಮಿತಿ.**

ಇದು ಸಂವಿಧಾನ ಹಾಗೂ ದೇಶದ ಸಮಸ್ತ ದಲಿತರಿಗೆ ಮಾಡಿದ ಅವಮಾನವಾಗಿದೆ. ಈ ಘಟನೆಯನ್ನು ನಮ್ಮ ಸಂಘಟನೆ ಉಗ್ರವಾಗಿ ಖಂಡಿಸುತ್ತದೆ ಎಂದರು.

ಈ ಸಂದರ್ಭದಲ್ಲಿ ಮುಖಂಡರಾದ ಮಹೇಶ್ ರೋಖಡೆ, ಶಿವಯೋಗಿ ಹಿರೇಮಠ, ಕಿರಣ್ ಹಿರೇಮಠ, ಸೋಮು ಗುಡಿ, ಕುಮಾರ್ ನಡಿಗೇರಿ, ವಿಶ್ವನಾಥ ಶೀರಿ ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

## 2025ನೇ ಸಾಲಿನ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಸ್ಮಾರಕ ರಾಷ್ಟ್ರೀಯ ಪ್ರಶಸ್ತಿ ಪ್ರಕಟ

# ಡಾ. ಕಲಬುರ್ಗಿಯವರಿಗೆ ಮರಣೋತ್ತರ ಪ್ರಶಸ್ತಿ




■ವಿಜಯಸಾಕ್ಷಿ ಸುದ್ದಿ, ಗದಗ

ನಾಡು - ನುಡಿ, ವಚನ ಸಾಹಿತ್ಯ, ಬಸವತತ್ವ ಹಾಗೂ ಸಮಾಜಕ್ಕಾಗಿ ಸಲ್ಲಿಸಿದ ಅಪಾರ ಸೇವೆಯನ್ನು ಗುರುತಿಸಿ ಗದುಗಿನ ತೋಂಟದಾರ್ಯ ಮಠದಿಂದ 2025ನೇ ಸಾಲಿನ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಸ್ಮಾರಕ ರಾಷ್ಟ್ರೀಯ ಪ್ರಶಸ್ತಿಗೆ ಮರಣೋತ್ತರವಾಗಿ ನಾಡೋಜ ಲಿಂ. ಡಾ. ಎಂ.ಎಂ. ಕಲಬುರ್ಗಿ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಪೂಜ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಸ್ಮಾರಕ ರಾಷ್ಟ್ರೀಯ ಪ್ರಶಸ್ತಿ ಸಮಿತಿಯ ಕಾರ್ಯದರ್ಶಿ ಎಸ್.ಎಸ್. ಪಟಣಶೆಟ್ಟರ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಡಾ. ತೋಂಟದ ಸಿದ್ಧಲಿಂಗ ವ್ಂಹಾಸ್ವಾವಿಂಗ್ಳ್ಂ ಪೂರ್ವಾಶ್ರಮದಲ್ಲಿ ಡಾ. ಎಂ.ಎಂ. ಕಲಬುರ್ಗಿಯವರ ವಿದ್ಯಾರ್ಥಿಯಾಗಿದ್ದರು. ಡಾ. ಎಂ.ಎಂ. ಕಲಬುರ್ಗಿಯವರ ಬಹುಮುಖ ವ್ಯಕ್ತಿತ್ವ, ಬಹುಮುಖ ಪ್ರತಿಭೆಯೊಂದಿಗೆ ಕನ್ನಡದ ಶ್ರೇಷ್ಠ ಪ್ರಾಧ್ಯಾಪಕರಾಗಿ, ಉನ್ನತ ಶ್ರೇಣಿಯ ಸಂಶೋಧಕರಾಗಿ, ಕನ್ನಡ ಅಧ್ಯಯನ ಪೀಠದ ದಕ್ಷ ಅಧ್ಯಕ್ಷರಾಗಿ, ಹಂಪಿ ಕನ್ನಡ ವಿಶ್ವವಿದ್ಯಾಲಯದ ಮಾದರಿ ಕುಲಪತಿಗಳಾಗಿ ಸೇವೆ ಸಲ್ಲಿಸಿದ್ದಾರೆ. ಹಲವಾರು ಧಾರ್ಮಿಕ, ಸಾಮಾಜಿಕ, ಶೈಕ್ಷಣಿಕ, ಸಾಂಸ್ಕೃತಿಕ ಸಂಘ-ಸಂಸ್ಥೆಗಳ ನಿರ್ದೇಶಕರಾಗಿದ್ದರು.

ಕನ್ನಡ ನಾಡು-ನುಡಿ, ಸಾಹಿತ್ಯ - ಸಂಸ್ಕೃತಿಗಳ ಉತ್ಕಟ ಚಿಂತಕರಾಗಿ, ಬಹುಶಿಸ್ತಿನ ಅಧ್ಯಯನದ ಬರಹಗಾರರಾಗಿದ್ದರು.

▸▸ 3ನೇ ಪುಟಕ್ಕೆ

## ಎಸ್‌ಎಸ್‌ಕೆ 'ನಮ್ಮೂರ ದಸರಾ' ಕಾರ್ಯಕ್ರಮದಲ್ಲಿ ಕೃಷ್ಣಗೌಡ ಎಚ್.ಪಾಟೀಲ ಅಭಿಮತ

# ಉತ್ತಮ ಕೆಲಸಗಳಿಂದ ಸಮಾಜ ಪರಿವರ್ತನೆ

■ವಿಜಯಸಾಕ್ಷಿ ಸುದ್ದಿ, ಗದಗ

ಎಸ್‌ಎಸ್‌ಕೆ ಸಮಾಜದಲ್ಲಿ ಯುವ ನಾಯಕರನ್ನು ಗುರುತಿಸುವ ಕೆಲಸವಾಗಬೇಕು ಎಂದು ಯವ ಮುಖಂಡ ಕೃಷ್ಣಗೌಡ ಎಚ್.ಪಾಟೀಲ ಹೇಳಿದರು.

ನಗರದ ಹಳೇ ಸರಾಫ್ ಬಜಾರದ ಶ್ರೀ ಜಗದಂಬಾ ದೇವಸ್ಥಾನದ ಸಹಸ್ರಾರ್ಜುನ ಸಮುದಾಯ ಭವನದ ಬಾಸ್ಕರಸಾ ಪವಾರ ಸಭಾಂಗಣದ ದಸರಾ ದರ್ಬಾರ ವೇದಿಕೆಯಲ್ಲಿ ಜರುಗಿದ ನಮ್ಮೂರ ದಸರಾ-2025ರ 7ನೇ ದಿನದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಒಳ್ಳೆಯ ಕೆಲಸ ಮಾಡುವ ಮೂಲಕ ಸಮಾಜದಲ್ಲಿ ಪರಿವರ್ತನೆ ಕಾಣಬಹುದು. ಎಸ್‌ಎಸ್‌ಕೆ ಸಮಾಜ ಬಾಂಧವರು ಇಂದಿನ ಯುವ ಪೀಳಿಗೆಯ ಬಗ್ಗೆ ಹೆಚ್ಚು ಚಿಂತನೆ ಮಾಡಬೇಕಿದೆ. ಸಮಾಜದ ಬಡ ಮಕ್ಕಳಿಗೆ ಕೌಶಲ್ಯ ಅಭಿವೃದ್ಧಿ



ತರಬೇತಿ ನೀಡುವ ಕುರಿತು ಅಭಿಯಾನ ಹಮ್ಮಿಕೊಳ್ಳಬೇಕು. ಸಾಕಷ್ಟು ಯುವಕರಲ್ಲಿ ಕೌಶಲ್ಯದ ಕೊರತೆಯಿಂದಾಗಿ ಕೆಲಸ ಪಡೆಯುವಲ್ಲಿ ವಿಫಲರಾಗುತ್ತಿದ್ದಾರೆ ಎಂದರು.

ಎಸ್‌ಎಸ್‌ಕೆ ಸಮಾಜದ ಪಂಚ ಕಮಿಟಿ ಅಧ್ಯಕ್ಷ ಫಕೀರಸಾ ಬಾಂಡಗೆ ಅಧ್ಯಕ್ಷತೆ ವಹಿಸಿದ್ದರು.


> ಈ ಹಿಂದೆ ಬೃಹತ್ ಉದ್ಯೋಗ ಮೇಳದಲ್ಲಿ 1800 ಜನರು ಪಾಲ್ಗೊಂಡಿದ್ದರು. ಅವರಲ್ಲಿ 600 ಜನರಿಗೆ ಸ್ಥಳದಲ್ಲಿ ಆಯ್ಕೆ ಪ್ರಮಾಣಪತ್ರ ನೀಡಲಾಯಿತು. ಅದರಲ್ಲಿ 60 ಜನರ ಯುವಕ-ಯುವತಿಯರು ಮಾತ್ರ ಕೆಲಸ ಮಾಡುತ್ತಿದ್ದಾರೆ. ಇದು ನಮ್ಮಲ್ಲಿರುವ ಕೌಶಲ್ಯದ ಕೊರತೆಯನ್ನು ಎತ್ತಿ ತೋರಿಸುತ್ತಿದೆ. ಅದ್ದರಿಂದ ಇಂದಿನ ಯುವಕ-ಯುವತಿಯರಿಗೆ ಕೌಶಲ್ಯ ತರಬೇತಿ ಅಗತ್ಯವಾಗಿದೆ ಎಂದು ಕೃಷ್ಣಗೌಡ ಎಚ್.ಪಾಟೀಲ ಅಭಿಪ್ರಾಯಪಟ್ಟರು.

ವೇದಿಕೆ ಮೇಲೆ ಗಣ್ಯ ಉದ್ಯಮಿ ಎಸ್.ಡಿ. ಪವಾರ, ಗದಗ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಎಸ್‌ಎಸ್‌ಕೆ ಸಮಾಜ ಪಂಚ ಕಮಿಟಿ ಉಪಾಧ್ಯಕ್ಷ ರಾಜು ಬದಿ, ಗೌರವ ಕಾರ್ಯದರ್ಶಿ ವಿನೋದ ಶಿದ್ಲಿಂಗ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಪಂಚ ಕಮಿಟಿ ಸದಸ್ಯರಾದ ಸುರೇಶಕುಮಾರ ಬದಿ, ಪರಶುರಾಮ ಬದಿ, ವಿಷ್ಣುಸಾ ಶಿದ್ಲಿಂಗ, ಮಾರುತಿ ಪವಾರ, ಪ್ರಕಾಶ ಬಾಕಳೆ, ಶ್ರೀನಿವಾಸ ಬಾಂಡಗೆ, ಅಂಬಾಸಾ ಖಟವಟೆ, ವಿನೋದ ಬಾಂಡಗೆ, ತರುಣ ಸಂಘದ ವಿಶ್ವನಾಥಸಾ ಸೋಳಂಕಿ, ರಾಘು ಬಾರಡ, ಶ್ರೀಕಾಂತ ಬಾಕಳೆ, ಸುಧೀರ ಕಾಟಿಗರ, ನಾಗರಾಜ ಖೋಡೆ, ಮಹಿಳಾ ಮಂಡಳದ ಅಧ್ಯಕ್ಷೆ ಉಮಾಬಾಯಿ ಬೇವಿನಕಟ್ಟಿ, ಗೀತಾಬಾಯಿ ಹಬೀಬ ಮುಂತಾದವರಿದ್ದರು.

ರವಿ ಶಿದ್ಲಿಂಗ ಸ್ವಾಗತಿಸಿದರು. ಜಿ.ಎನ್. ಹಬೀಬ ನಿರೂಪಿಸಿದರು. ಅನಿಲ್ ಖಟವಟೆ ವಂದಿಸಿದರು.

## ನಾಲ್ವತವಾಡ ಶ್ರೀವೀರೇಶ್ವರ ಶಿವಶರಣರಪುರಾಣ ಮಂಗಲೋತ್ಸವ ನಾಳೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಹಾಲಕೆರೆ ಶ್ರೀ ಅನ್ನದಾನೇಶ್ವರ ಸಂಸ್ಥಾನ ಮಠದ ಮುಪ್ಪಿನ ಬಸವಲಿಂಗ ಸ್ವಾಮೀಜಿಯವರ ಅಪ್ಪಣೆಯ ಮೇರೆಗೆ ಸಮೀಪದ ಜಕ್ಕಲಿ ಗ್ರಾಮದಲ್ಲಿ ಅಕ್ಟೋಬರ್ 1ರಂದು ಅನ್ನದಾನೇಶ್ವರ ಜಾತ್ರಾ ಮಹೋತ್ಸವ ಹಾಗೂ ನಾಲ್ವತವಾಡ ಶ್ರೀವೀರೇಶ್ವರ ಶಿವಶರಣರ ಮಹಾ ಪುರಾಣ ಪ್ರವಚನ ಮಂಗಲೋತ್ಸವ ಜರುಗಲಿದೆ.

ಕಾರ್ಯಕ್ರಮದ ಅಂಗವಾಗಿ ಬೆಳಗ್ಗೆ 6ಕ್ಕೆ ಶ್ರೀಕುಂಭೇಶ್ವರ ಶಿವಲಿಂಗಕ್ಕೆ ಮಹಾ ರುದ್ರಾಭಿಷೇಕ ಹಾಗೂ ಸಹಸ್ರ ಬಿಲ್ವಾರ್ಚನೆ, 8ಕ್ಕೆ ಸೋಮಸಮುದ್ರ ಕೊಟ್ಟೂರಸ್ವಾಮಿ ಶಾಖಾ ವಿರಕ್ತಮಠದ ಸಿದ್ದಲಿಂಗ ಮಹಾಸ್ವಾಮಿಗಳವರ ಅಡ್ಡಪಲ್ಲಕ್ಕಿ ಉತ್ಸವವು ಶ್ರೀಮಠದಿಂದ ಹೊರಟು ನರೇಗಲ್ಲ-ಕೋಡಿಕೊಪ್ಪದ ಪುರವಂತರು, ವಿವಿಧ ಭಜನಾ ಮೇಳಗಳು, ಕರಡಿ ಮಜಲು, ಡೊಳ್ಳು ಕುಣಿತ ಹಾಗೂ ಸುಮಂಗಲಿಯರ ಆರತಿಯೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಮಹಾ ಶಿವಶರಣರಾದ ಅಣ್ಣಯ್ಯ ತಮ್ಮಯ್ಯನವರ ಪುಣ್ಯತಾಣಕ್ಕೆ ತೆರಳಲಿದೆ.

ಅಲ್ಲಿ ಶ್ರೀಗಳವರ ಪಾದ ಪೂಜೆಗೊಂಡ ಬಳಿಕ ಶ್ರೀಗಳವರ ಮಠಕ್ಕೆ ಮರಳಿ ಬರುವುದು.

ಮಧ್ಯಾಹ್ನ 1ಕ್ಕೆ ಮಹಾಗಣಾರಾಧನೆ, ಸಂಜೆ 7ಕ್ಕೆ ಧರ್ಮಸಭೆ ಹಾಗೂ ತಿಂಗಳ ಪರ್ಯಂತವಾಗಿ ಸಾಗಿ ಬಂದ ನಾಲ್ವತವಾಡ ಶ್ರೀ ವೀರೇಶ್ವರ ಶಿವಶರಣರ ಮಹಾ ಮಂಗಲಗೊಳ್ಳುವುದು.

ಹಾಲಕೆರೆ ಶ್ರೀ ಮಠದ ಪೀಠಾಧಿಪತಿ ಮುಪ್ಪಿನ ಬಸವಲಿಂಗ ಸ್ವಾಮೀಜಿಯವರ ದಿವ್ಯ ಸಾನ್ನಿಧ್ಯದಲ್ಲಿ, ಶಾಖಾ ಶಿವಯೋಗಮಂದಿರ ನಿಡಗುಂದಿಕೊಪ್ಪ ಅಭಿನವ ಚನ್ನಬಸವ ಸ್ವಾಮೀಜಿಯವರ ಅಧ್ಯಕ್ಷತೆಯಲ್ಲಿ, ಜೇಗೇರಿಯ ಷ.ಬ್ರ. ಗುರುಸಿದ್ಧ ಶಿವಾಚಾರ್ಯ ಸ್ವಾಮೀಜಿ, ಬನವಾಸಿಯ ಶಿವಲಿಂಗ ದೇಶಿಕರ ನೇತೃತ್ವದಲ್ಲಿ ಧರ್ಮಸಭೆ ನಡೆಯಲಿದೆ.

ಗದಗ ವೀರೇಶ್ವರ ಪುಣ್ಯಾಶ್ರಮದ ಲಿಂ. ಪಂ. ಪುಟ್ಟರಾಜ ಗವಾಯಿಗಳ ಶಿಷ್ಯರಾದ ಬೇವೂರಿನ ವೇ.ಮೂ. ಎಂ.ಜಿ. ಗುರುಸಿದ್ದೇಶ್ವರ ಶಾಸ್ತ್ರೀಗಳು ಹಾರ್ಮೋನಿಯಂ ಸಂಗೀತದಿಂದ ಪುರಾಣ ಪ್ರವಚನ ಮಂಗಲಗೊಳಿಸುವರು. ಕುಷ್ಟಗಿಯ ಎಸ್.ಎಸ್. ಹಿರೇಮಠ ತಬಲಾ ಸಾಥ್ ನೀಡಲಿದ್ದಾರೆ. ಅಡ್ಡಪಲ್ಲಕ್ಕಿ ಶೃಂಗಾರ ಹಾಗೂ ಸೇವೆಗಳು ಓಣಿಯ ಸದ್ಭಕ್ತರಿಂದ ನಡೆಯಲಿದೆ ಎಂದು ಜಾತ್ರಾ ಮಹೋತ್ಸವ ಸಮಿತಿ ಪ್ರಕಟಣೆ ತಿಳಿಸಿದೆ.

ಬಿಪಿಎಲ್ ಪಡಿತರ ಚೀಟಿಗಳನ್ನು ರದ್ದುಗೊಳಿಸಿರುವ ಸರ್ಕಾರದ ಕ್ರಮವನ್ನು ಖಂಡಿಸಿ ಪ್ರತಿಭಟನೆ

# ಗ್ಯಾರಂಟಿ ಯೋಜನೆಗಳಿಂದ ವಂಚಿಸುವ ಹುನ್ನಾರ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರದಿಂದ ರಾಜ್ಯಾದ್ಯಂತ 8 ಲಕ್ಷಕ್ಕೂ ಹೆಚ್ಚು ಬಡವರ ಬಿ.ಪಿ.ಎಲ್ ಪಡಿತರ ಚೀಟಿಗಳನ್ನು ಏಕಾಏಕಿಯಾಗಿ ರದ್ದುಗೊಳಿಸಿದ್ದರಿಂದ ಲಕ್ಷಾಂತರ ಬಡ ಕುಟುಂಗಳು ಬೀದಿಗೆ ಬಂದಿವೆ. ಪಡಿತರ ಚೀಟಿಗಳನ್ನು ರದ್ದುಗೊಳಿಸಿ ಸರ್ಕಾರದ ಯೋಜನೆಗಳಿಂದ ವಂಚಿಸುತ್ತಿರುವ ಸರ್ಕಾರದ ಕ್ರಮವನ್ನು ಖಂಡಿಸಿ ಸ್ಲಂ ಜನಾಂದೋಲನ-ಕರ್ನಾಟಕ ಮತ್ತು ಗದಗ ಜಿಲ್ಲಾ ಸ್ಲಂ ಸಮಿತಿಯಿಂದ ಗಾಂಧಿ ಸರ್ಕಲ್‌ನಿಂದ ರ್‍ಯಾಲಿಯನ್ನು ನಡೆಸಿ ಆಹಾರ ಇಲಾಖೆ ಕಚೇರಿಯೆದುರು ಪ್ರತಿಭಟನೆ ನಡೆಸಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಮಾತನಾಡಿ, 2023ರಲ್ಲಿ ಅಧಿಕಾರಕ್ಕೆ ಬಂದ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ. ಆದರೆ ರಾಜ್ಯ ಸರ್ಕಾರ 1.20 ಲಕ್ಷ ರೂ ವಾರ್ಷಿಕ ಆದಾಯ ಹೊಂದಿರುವ ಕಾರಣ ನೀಡಿ ಪಡಿತರ ಚೀಟಿಗಳನ್ನು ರದ್ದುಗೊಳಿಸಿ ಲಕ್ಷಾಂತರ ಕುಟುಂಬಗಳನ್ನು ಬೀದಿಗೆ ತಂದಿದೆ. ರಾಜ್ಯ ಸರ್ಕಾರದ ಜನವಿರೋಧಿ ನೀತಿಯಿಂದ, ಆಹಾರ ಇಲಾಖೆಯ ಎಡವಟ್ಟಿನಿಂದ ಗದಗ-ಬೆಟಗೇರಿ ಶಹರದ 2304 ಕಾರ್ಡ್‌ಗಳು ಮತ್ತು ಗದಗ ಗ್ರಾಮೀಣ ಭಾಗದ 1478 ಕಾರ್ಡ್‌ಗಳನ್ನು ರದ್ದುಗೊಳಿಸಿದ್ದು, ಸಾವಿರಾರು ಕುಟುಂಬಗಳು ಉಪವಾಸ ಬಿಳುವ ಸ್ಥಿತಿ ನಿರ್ಮಾಣವಾಗಿದೆ ಎಂದು ಆರೋಪಿಸಿದರು.



ಪಡಿತರ ಚೀಟಿ ರದ್ದುಗೊಂಡಿರುವ ಫಲಾನುಭವಿಗಳಿಗೆ ಆಹಾರ ಇಲಾಖೆಯಿಂದ ಯಾವುದೇ ನೋಟಿಸ್ ನೀಡದೇ, ಈ ಕುಟುಂಬಗಳ ಸಮೀಕ್ಷೆಯನ್ನು ನಡೆಸದೇ ಮತ್ತು ಪಡಿತರ ಅಂಗಡಿಗಳ ಮುಂದೆ ಮಾಹಿತಿಯನ್ನು ಹಚ್ಚದೇ ಏಕಾಏಕಿ ಸಾವಿರಾರು ಕಾರ್ಡ್‌ಗಳನ್ನು ರದ್ದುಗೊಳಿಸಿದ್ದರಿಂದ ಬಡ ಕುಟುಂಬಗಳು ಆಹಾರ ಇಲಾಖೆ ಮುಂದೆ ನಿಂತು ಕಣ್ಣೀರು ಹಾಕುತ್ತಿದ್ದಾರೆ. ಇದು ಕೇವಲ ರಾಜ್ಯದ ಬಡ ಕುಟುಂಬಗಳನ್ನು ಪಂಚ ಗ್ಯಾರಂಟಿ ಯೋಜನೆಗಳಿಂದ ವಂಚಿಸುವ ಹುನ್ನಾರವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಗದಗ ಜಿಲ್ಲಾ ಸ್ಲಂ ಸಮಿತಿ ಉಪಾಧ್ಯಕ್ಷ ಅಶೋಕ ಕುಡತಿನ್ನಿ, ಕಾರ್ಯದರ್ಶಿ ಅಶೋಕ ಕುಸಬಿ, ಸಮಿತಿ ಮುಖಂಡರಾದ ಇಬ್ರಾಹಿಂ ಮುಲ್ಲಾ, ಶರಣಪ್ಪ ಸೂಡಿ, ಮೌಲಾಸಾಬ ಗಚ್ಚಿ, ಖಾಜಾಸಾಬ ಮುಲ್ಲಾನವರ, ಮೆಹರುನಿಸಾ ಡಂಬಳ, ಜಂದಿಸಾಬ ಢಾಲಾಯತ, ಮಕ್ತುಮಸಾಬ ಮುಲ್ಲಾನವರ, ಬಾಷಾಸಾಬ ಡಂಬಳ, ಮೈಮುನ ಬೈರಕದಾರ, ವೆಂಕಟೇಶ ಬಿಂಕದಕಟ್ಟಿ, ಗೌಸಸಾಬ ಅಕ್ಕಿ, ರವಿ ಗೋಸಾವಿ, ಸಾಕ್ರುಬಾಯಿ ಗೋಸಾವಿ ಮುಂತಾದವರು ಭಾಗವಹಿಸಿದ್ದರು.

ಮಹಿಳಾ ಸಂಚಾಲಕಿ ಪರವೀನಬಾನು ಹವಾಲ್ದಾರ ಮಾತನಾಡಿ, ಬಿ.ಪಿ.ಎಲ್ ಪಡಿತರ ಚೀಟಿಗಳ ಮೂಲಕ ಸಬ್ಸಿಡಿ ದರದಲ್ಲಿ ಆಹಾರ ಧಾನ್ಯ ಪಡೆಯಲು ಕಡ್ಡಾಯ ದಾಖಲೆಯಾಗಿದೆ. ಸರ್ಕಾರದ ಹಲವಾರು ಯೋಜನೆಗಳಿಗೆ ಅರ್ಜಿ ಸಲ್ಲಿಸುವಾಗ ಪಡಿತರ ಚೀಟಿ ಗುರುತಿನ ಪುರಾವೆ ಆಗಿರುತ್ತದೆ. ಆದರೆ ಆಹಾರ ಇಲಾಖೆ ಅಧಿಕಾರಿಗಳು ಕಚೇರಿಯಲ್ಲಿಯೇ ಕುಳಿತು ಸಾವಿರಾರು ಬಡ ಕುಟುಂಬಗಳ ಕಾರ್ಡ್‌ಗಳನ್ನು ರದ್ದುಗೊಳಿಸಿದ್ದಾರೆ. ಸರ್ಕಾರದ ಇಂತಹ ಜನವಿರೋಧಿ ನಿರ್ಧಾರದಿಂದ ಸಾವಿರಾರು ಬಡ ಕುಟುಂಬಗಳು ಉಪವಾಸ ಬೀಳುವ ಸ್ಥಿತಿ ನಿರ್ಮಾಣವಾಗಿದೆ ಎಂದು ಆರೋಪಿಸಿದರು.



ರೋಣ ತಾಲೂಕಿನಲ್ಲಿ ಸುರಿದ ಧಾರಾಕಾರ ಮಳೆಯಿಂದ ರವಿವಾರ ಬೆಳಗಿನ ಜಾವ ಬೆಣ್ಣೆಹಳ್ಳ ಭರ್ತಿಯಾಗಿ ರೋಣ-ನರಗುಂದ ಸಂಪರ್ಕದಲ್ಲಿ ತಡೆ ಉಂಟಾಗಿ, ವಾಹನ ಸವಾರರು ಪರದಾಡುವಂತಾಯಿತು. ರವಿವಾರ ಮಧ್ಯಾಹ್ನ 2 ಗಂಟೆಯವರೆಗೂ ಬಸ್ ಸಂಚಾರ ಸ್ಥಗಿತಗೊಂಡು, ಬೇರೆ ಸ್ಥಳಗಳಿಗೆ ತೆರಳಬೇಕಿದ್ದ ಪ್ರಯಾಣಿಕರು ತೊಂದರೆ ಅನುಭವಿಸುವಂತಾಯಿತು..

## ಜನತಾ ಬಜಾರ್‌ಗೆ ನೂತನ ಪದಾಧಿಕಾರಿಗಳ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ತಾಲೂಕಾ ಕೋ-ಆಪರೇಟಿವ್ ಕಂಜುಮರ್ಸ್ ಹೋಲ್‌ಸೇಲ್ ಸ್ಟೋರ್ಸ್ ಲಿ (ಜನತಾ ಬಜಾರ್)ಗೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ತಿಪ್ಪಣ್ಣ ವಿರೂಪಾಕ್ಷಪ್ಪ ಕೊಚಿಗೇರಿ, ಉಪಾಧ್ಯಕ್ಷರಾಗಿ ತಿರುಮಲರಡ್ಡಿ ತಿರಕರಡ್ಡಿ ಅಳವಂಡಿ, ಸದಸ್ಯರಾಗಿ ಹುಮಾಯೂನ್ ಮಾಗಡಿ,



ಬಸವರಾಜ ಹರ್ತಿ, ಶಿವನಗೌಡ ಪಾಟೀಲ, ಅರ್ಜುನ್ನ ನಾಗಪ್ಪ ವಡ್ಡರ, ದೇವಕ್ಕ ಭೀಮಪ್ಪ ತಳವಾರ, ಮಲ್ಲಪ್ಪ ಕರಿಗಾರ, ಗಂಗವ್ವ ಚಂದ್ರಕಾಂತ ಅಕ್ಕಿ, ಮಂಗಳಾ ಸೂರ್ಯಕಾಂತ ಕಪ್ಪತ್ತನವರ, ಸುರೇಶಗೌಡ ವೆಂಕನಗೌಡ ಪಾಟೀಲ, ಚನ್ನಪ್ಪ ಸಿದ್ರಾಮಪ್ಪ ಹಲಸೂರ, ತೇಜಪ್ಪ ನಿಂಗಪ್ಪ ಬಡಭೀಮಪ್ಪನವರ, ಮಂಜುರಡ್ಡಿ ಗೋವಿಂದರಡಿ ಮರಡ್ಡಿ, ಸರಕಾರದ ಪ್ರತಿನಿಧಿಯಾಗಿ ಮಾಂತೇಶ ಶಿವಬಸಪ್ಪ ದಶಮನಿ ಆಯ್ಕೆಯಾಗಿದ್ದಾರೆ.

ಲಿಂಬಯ್ಯಸ್ವಾಮಿಮಠದಿಂದ ನಂದಾ ದೀಪಾರಾಧನೆ ಕಾರ್ಯಕ್ರಮ ನಾಳೆ

# ಸಮಾಜ ಸೇವಕರಿಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಲಿಂಬಯ್ಯಸ್ವಾಮಿ ಮಠವು ಸತ್ಸಂಪ್ರದಾಯಗಳನ್ನು ನಡೆಸುತ್ತಾ ಬಂದಿದ್ದು, ಪ್ರತಿ ವರ್ಷದಂತೆ ನಂದಾ ದೀಪಾರಾಧನೆ ಮತ್ತು ಸನ್ಮಾನ ಕಾರ್ಯಕ್ರಮ ಅ. 1ರಂದು ಬುಧವಾರ ಸಂಜೆ 7ಕ್ಕೆ ಶ್ರೀಮಠದ ಆವರಣದಲ್ಲಿ ನಡೆಯಲಿದೆ ಎಂದು ಲಿಂಬಯ್ಯಸ್ವಾಮಿ ಪ್ರತಿಭಾ ಪ್ರತಿಷ್ಠಾನದ ಅಧ್ಯಕ್ಷ ಶಿವಪ್ರಕಾಶ ಲಿಂಬಯ್ಯಸ್ವಾಮಿಮಠ ಹೇಳಿದರು.

ಈ ಕುರಿತು ಸೋಮವಾರ ಶ್ರೀಮಠದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, 2 ದಶಕಗಳಿಂದ ನಮ್ಮ ಹಿರಿಯರಾದ ಲಿಂ. ಎಲ್.ಸಿ. ಲಿಂಬಯ್ಯಸ್ವಾಮಿಮಠ, ಲಿಂ. ಶರಣಯ್ಯನವರು ಲಿಂಬಯ್ಯಸ್ವಾಮಿಮಠ ಅವರು ಲಿಂಬಯ್ಯಸ್ವಾಮಿ ಪ್ರತಿಭಾ ಪ್ರತಿಷ್ಠಾನದ ಮೂಲಕ ಅನೇಕ ಧಾರ್ಮಿಕ, ಸಮಾಜಮುಖಿ ಕಾರ್ಯಗಳನ್ನು ಮಾಡುತ್ತಾ ಬಂದಿದ್ದಾರೆ. ವಿಜಯದಶಮಿ ದಿನ ವಿವಿಧ ಕ್ಷೇತ್ರಗಳಲ್ಲಿ ನಿಸ್ವಾರ್ಥ ಸೇವೆ ಮಾಡುವ ಸುಪ್ತ ಚೇತನಗಳಿಗೆ ಸತ್ಕಾರ, ನೇತ್ರದಾನ, ದೇಹದಾನಕ್ಕೆ ಪ್ರೇರೇಪಿಸಿ ಅವರನ್ನು ಗುರುತಿಸಿ ಸನ್ಮಾನಿಸಲಾಗುತ್ತದೆ. ಅವರು ನಡೆಸಿಕೊಂಡು ಬಂದ ಸಂಪ್ರದಾಯವನ್ನು ಮುಂದು ವರೆಸಿಕೊಂಡು ಹೋಗಲಾಗುತ್ತಿದೆ ಎಂದರು.



ಪ್ರತಿ ವರ್ಷ ನಂದಾ ದೀಪಾರಾಧನಾ ಕಾರ್ಯಕ್ರಮದಲ್ಲಿ ತೆರೆಮರೆಯಲ್ಲಿ ಸಮಾಜ ಸೇವೆ ಮಾಡುತ್ತಿರುವ ಮಹನೀಯರನ್ನು ಗುರುತಿಸಿ ಗೌರವಿಸುವ ಕಾರ್ಯ ಮಾಡಲಾಗುತ್ತಿದೆ. ಈ ವರ್ಷ ಸಂಘ ಜೀವಿಯಾಗಿ ಆಧ್ಯಾತ್ಮಿಕತೆಯಲ್ಲಿ ತಮ್ಮನ್ನು ಸೇರಿ ಕುಟುಂಬವನ್ನೂ ತೊಡಗಿಸಿಕೊಂಡಿರುವ ಸಮಾಜಮುಖಿ ಚಿಂತನೆಯ ಈರಣ್ಣ ಯರ್ಲಗಟ್ಟಿ, ಇತ್ತೀಚೆಗೆ ಕೇಂದ್ರ ಸರಕಾರದಿಂದ ಶ್ರೇಷ್ಠ ತನಿಖಾಧಿಕಾರಿ ಪ್ರಶಸ್ತಿ ಪುರಸ್ಕೃತ, ಕಲಬುರ್ಗಿ ಜಿಲ್ಲೆಯ ಡಿವೈಎಸ್‌ಪಿ, ತಾಲೂಕಿನ ರಾಮಗಿರಿ ಗ್ರಾಮದ ಶಂಕರಗೌಡ ಪಾಟೀಲ ಹಾಗೂ ವಿಕಲಚೇತನ ಮಕ್ಕಳ ಸೇವೆಯಲ್ಲಿ ನಿಸ್ವಾರ್ಥದಿಂದ ಸಮರ್ಪಿಸಿಕೊಂಡಿರುವ ಪಟ್ಟಣದ ಅರಳು ವಿಶೇಷ ಅಗತ್ಯತೆಯುಳ್ಳ ಬುದ್ಧಿಮಾಂದ್ಯ ಮಕ್ಕಳ ವಸತಿರಹಿತ ಶಾಲೆಯ ಸಂಸ್ಥಾಪಕಿ ನೀಲಮ್ಮ ಮಂಜುನಾಥ ದಾಸಪ್ಪನವರ ಇವರನ್ನು ಸತ್ಕರಿಸಲಾಗುತ್ತಿದೆ ಎಂದರು. ಈ ವೇಳೆ ಪ್ರತಿಷ್ಠಾನದ ಧರ್ಮದರ್ಶಿ ಚಿದಾನಂದ ಲಿಂಬಯ್ಯಸ್ವಾಮಿಮಠ, ಶಾಂತರಾಜ ಓದುನವರ, ಕೆ.ಎಸ್. ಕುಲಕರ್ಣಿ, ನಿರಂಜನ ಲಿಂಬಯ್ಯಸ್ವಾಮಿಮಠ, ಬಸಣ್ಣ ಬೆಂಡಿಗೇರಿ, ಬಸಣ್ಣ ಗಾಂಜಿ, ಮಹೇಶ ಲಿಂಬಯ್ಯಸ್ವಾಮಿಮಠ, ಗಂಗಪ್ಪ ದುರಗಣ್ಣವರ, ನಿಂಗಪ್ಪ ಬನ್ನಿ, ವಿ.ಜಿ. ಪಡಗೇರಿ, ನೀಲಪ್ಪ ಪೂಜಾರ, ರಾಮಣ್ಣ ಪಡಗೇರಿ, ನಿಂಗಪ್ಪ ಕೋರದಾಳ, ಎಂ.ಕೆ. ಕಳ್ಳಿಮಠ, ಶರಣಪ್ಪ ಗುಳಗಣ್ಣವರ ಹಾಜರಿದ್ದರು.

ಕಾರ್ಯಕ್ರಮದ ಸಾನ್ನಿಧ್ಯವನ್ನು ಹೂವಿನಶಿಗ್ಲಿ ಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ವಹಿಸುವರು. ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕಸಾಪ ಅಧ್ಯಕ್ಷ ಈಶ್ವರ ಮೆಡ್ಲೇರಿ ಆಗಮಿಸಲಿದ್ದಾರೆ ಎಂದು ಶಿವಪ್ರಕಾಶ ಲಿಂಬಯ್ಯಸ್ವಾಮಿಮಠ ತಿಳಿಸಿದರು.

## ಯೋಜನಾ ಸಮಿತಿಗೆ ಸದಸ್ಯರ ಆಯ್ಕೆಗೆ ಚುನಾವಣಾ ವೇಳಾಪಟ್ಟಿ ಪ್ರಕಟ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 310 ರ ಪ್ರಕಾರ ಜಿಲ್ಲಾ ಯೋಜನಾ ಸಮಿತಿ ರಚಿಸಬೇಕಾಗಿದ್ದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ( ಜಿಲ್ಲಾ ಯೋಜನಾ ಸಮಿತಿ ಸದಸ್ಯರುಗಳ ಚುನಾವಣೆ ) ನಿಯಮಗಳ 1996 ರ 8 ರ ನಿಯಮದ ಪ್ರಕಾರ ಗದಗ ಜಿಲ್ಲಾ ಯೋಜನಾ ಸಮಿತಿಗೆ ಪುರಸಭೆ ಮತಕ್ಷೇತ್ರಗಳಿಂದ ಪ್ರತ್ಯೇಕವಾಗಿ ಸದಸ್ಯರ ಆಯ್ಕೆ ಕುರಿತು ಚುನಾವಣೆ ನಡೆಸಲಾಗುವುದು.

ಪುರಸಭಾ ಕ್ಷೇತ್ರದಿಂದ 17 ಸದಸ್ಯರ ಆಯ್ಕೆಗೆ ( ನಗರಸಭೆ/ಪುರಸಭೆ/ಪಟ್ಟಣ ಪಂಚಾಯತ್ ಚುನಾಯಿತ ಸದಸ್ಯರು) ಚುನಾವಣೆ ನಡೆಸಲಾಗುತ್ತಿದ್ದು , ನಾಮಪತ್ರಗಳನ್ನು ಜಿಲ್ಲಾ ಪಂಚಾಯತ್ ವಿಡಿಯೋ ಕಾನ್ಫರೆನ್ಸ್ ಕೊಠಡಿಯಲ್ಲಿ ಅಕ್ಟೋಬರ್ 3 ರವರೆಗೆ ( ರಜಾ ದಿನ ಹೊರತುಪಡಿಸಿ) ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ಸ್ವೀಕರಿಸಲಾಗುವುದು.

ಅಕ್ಟೋಬರ್ 6 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್ ವಿಡಿಯೋ ಕಾನ್ಫರೆನ್ಸ್ ಕೊಠಡಿಯಲ್ಲಿ ನಾಮಪತ್ರಗಳನ್ನು ಪರಿಶೀಲಿಸಲಾಗುವುದು. ನಾಮಪತ್ರ ಹಿಂತೆಗೆದುಕೊಳ್ಳಲು ಅಕ್ಟೋಬರ್ 9 ಕೊನೆಯ ದಿನವಾಗಿದ್ದು, ಮತದಾನವನ್ನು ಅಕ್ಟೋಬರ್ 14 ರಂದು ಜಿ.ಪಂ. ವಿಡಿಯೋ ಕಾನ್ಫರೆನ್ಸ್ ಕೊಠಡಿಯಲ್ಲಿ ಬೆಳಿಗ್ಗೆ 9 ಗಂಟೆಯಿಂದ ಮಧ್ಯಾಹ್ನ 4 ಗಂಟೆಯವರೆಗೆ ನಡೆಸಲಾಗುವುದು ಮತ್ತು ಅದೇ ಸ್ಥಳದಲ್ಲಿ ಅಕ್ಟೋಬರ್ 14 ರಂದು ಸಂಜೆ 5 ಗಂಟೆಗೆ ಮತ ಎಣಿಕೆ ನಡೆಯಲಿದೆ. ಅಕ್ಟೋಬರ್ 15 ರ ಸಂಜೆ 5 ಗಂಟೆಗೆ ಚುನಾವಣೆ ಪೂರ್ಣಗೊಳ್ಳಲಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಮೂಲ್ಯ ದತ್ತು ಕೇಂದ್ರದ ಸೇವೆ ಅಮೂಲ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಸೇವಾಭಾರತಿ ಸಂಸ್ಥೆಯ ಅಮೂಲ್ಯ ವಿಶೇಷ ದತ್ತು ಸ್ವೀಕಾರ ಕೇಂದ್ರವು ಪರಿತ್ಯಕ್ತ ಮಕ್ಕಳನ್ನು ಸಂರಕ್ಷಿಸಿ ಪೋಷಣೆ ಮಾಡುವ ಮೂಲಕ ಅಮೂಲ್ಯವಾದ ಸೇವೆ ಸಲ್ಲಿಸುತ್ತಿರುವದು ಶ್ಲಾಘನೀಯ ಎಂದು ಗದುಗಿನ ತಜ್ಞ ವೈದ್ಯ ಡಾ. ಪ್ರಕಾಶ ಸಂಕನೂರ ಅಭಿಪ್ರಾಯಪಟ್ಟರು.

ಅವರು ಬೆಟಗೇರಿಯ ವಿಶೇಷ ದತ್ತು ಸ್ವೀಕಾರ ಕೇಂದ್ರದಲ್ಲಿ ಪೋಷಣೆಗೊಂಡ ಮಗುವನ್ನು ಮಕ್ಕಳಿಲ್ಲದ ದಂಪತಿಗೆ ದತ್ತುಪೂರ್ವ ಪೋಷಣೆಗೆ ಹಸ್ತಾಂತರಿಸಿ ಮಾತನಾಡಿದರು.

ಮಗುವನ್ನು ದತ್ತು ಪಡೆದ ಪಾಲಕರು ಈ ಮಗುವಿಗೆ ಒಳ್ಳೆಯ ಶಿಕ್ಷಣ, ಸಂಸ್ಕಾರ, ಸಂಸ್ಕೃತಿಯನ್ನು ನೀಡಿ ಉತ್ತಮ ಪ್ರಜೆಯನ್ನಾಗಿ ಮಾಡಬೇಕು ಎಂದರಲ್ಲದೆ, ಅಮೂಲ್ಯ ಕೇಂದ್ರದ ಅಮೂಲ್ಯ ಸೇವೆಯನ್ನು ಬಣ್ಣಿಸಿದರು.

ಇನ್ನೋರ್ವ ಮುಖ್ಯ ಅತಿಥಿ ಡಾ. ಶ್ವೇತಾ ಪ್ರಕಾಶ ಸಂಕನೂರ ಮಾತನಾಡಿ, ಇದು ಮನಕಲಕುವ ಹಾಗೂ ಭಾವುಕತನವನ್ನುಂಟುಮಾಡುವ ಸನ್ನಿವೇಶವಾಗಿದ್ದು, ಮಗುವಿಗೆ ಉತ್ತಮ ಭವಿಷ್ಯ ರೂಪಿತಗೊಳ್ಳಲಿ ಎಂದರು.



ಮಗುವನ್ನು ದತ್ತು ಪಡೆದ ದಾವಣಗೆರೆಯ ರಾಜಕುಮಾರ ಮಾತನಾಡಿ, ಮಕ್ಕಳಿಲ್ಲದ ಕೊರಗಿನಲ್ಲಿದ್ದ ನಮಗೆ ಅಮೂಲ್ಯ ದತ್ತು ಕೇಂದ್ರದಿಂದ ಕಾನೂನಿನ ಪ್ರಕಾರ ಮಗುವನ್ನು ನಮ್ಮ ಮಡಿಲಿಗೆ ಹಾಕಿರುವದು ಸಂತಸ ತಂದಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕೇಂದ್ರದ ಅಧ್ಯಕ್ಷ ಮಲ್ಲಿಕಾರ್ಜುನ ಬೆಲ್ಲದ ಮಾತನಾಡಿದರು. ಸಮಾರಂಭದಲ್ಲಿ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷೆ ಜಯದೇವಿ ಕವಲೂರ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಪ್ರಭಾರಿ ಗಿರಿಜಾ ದೊಡ್ಡಮನಿ, ರಮೇಶ ಕಳ್ಳಿಮನಿ, ಸರ್ಕಾರಿ ಬಾಲಕಿಯರ ಬಾಲಮಂದಿರದ ಅಧೀಕ್ಷಕಿ ಲಕ್ಷ್ಮೀ ಬಾಗೇವಾಡಿ, ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯೆ ಸುಪರ್ಣ ಬ್ಯಾಹಟ್ಟಿ, ರಾಜೇಶ ಖಟವಟೆ, ನಾಗವೇಣಿ ಕಟ್ಟಿಮನಿ, ಗುರುಸಿದ್ಧಪ್ಪ ಕೊಣ್ಣೂರ, ಚನ್ನವೀರಪ್ಪ ಚನ್ನಪ್ಪನವರ, ಪ್ರಮೋದ ಹಿರೇಮಠ, ಅಭಿಷೇಕ ವಾಳೋದೆ, ಶ್ರೀಧರ ಕಾಂಬಳೆ ಉಪಸ್ಥಿತರಿದ್ದರು. ಅರುಣ ರಾಜಪುರೋಹಿತ ನಿರೂಪಿಸಿದರು ನರಸಿಂಹ ಕಾವಾರ್ತಿ ವಂದಿಸಿದರು.

ಅವೈಜ್ಞಾನಿಕ ಒಳ ಮೀಸಲಾತಿ ವರ್ಗೀಕರಣ ವಿರೋಧಿಸಿ ಧರಣಿ; ಪೂರ್ವಭಾವಿ ಸಭೆ

# ಅ.6ರಿಂದ ಬಂಜಾರರಿಂದ ಬೃಹತ್ ಪ್ರತಿಭಟನೆ

■ವಿಜಯಸಾಕ್ಷಿ ಸುದ್ದಿ, ಗದಗ

ಅವೈಜ್ಞಾನಿಕ ಒಳ ಮೀಸಲಾತಿ ವರ್ಗೀಕರಣ ವಿರೋಧಿಸಿ ಗದಗ ಜಿಲ್ಲಾ ಬಂಜಾರ ಸಮುದಾಯದ ಮುಖಂಡರಿಂದ ಗದಗ ತಾಲೂಕಿನ ನಾಗಾವಿಯ ಸುಕ್ಷೇತ್ರ ಶ್ರೀ ರೇಣುಕಾದೇವಿ ಯಲ್ಲಮ್ಮ ದೇವಸ್ಥಾನದಲ್ಲಿ ಜಿಲ್ಲೆಯ ಮುಖಂಡರು ಹೋರಾಟದ ಕುರಿತು ರೂಪರೇಷಗಳನ್ನು ಹಮ್ಮಿಕೊಳ್ಳಲು ಪೂರ್ವಭಾವಿ ಸಭೆ ಜರುಗಿತು.

ಸಭೆಯಲ್ಲಿ ಗದಗ ಜಿಲ್ಲೆಯ ಬಂಜಾರ ಸಮುದಾಯದ 72 ತಾಂಡಾಗಳ ನಾಯಕ್, ಡಾವ್, ಕಾರಭಾರಿ ಮತ್ತು ಮುಖಂಡರೆಲ್ಲರೂ ಸೇರಿ ಅಕ್ಟೋಬರ್ 6ರಿಂದ ಗದಗ ಜಿಲ್ಲಾಡಳಿತ ಕಚೇರಿ ಎದುರು ಬೃಹತ್ ಪ್ರತಿಭಟನೆಯೊಂದಿಗೆ ಅಹೋರಾತ್ರಿ ಧರಣಿಯನ್ನು ನಡೆಸಲು ತೀರ್ಮಾನಿಸಿದರು. ರಾಜ್ಯ ಸರ್ಕಾರದ ಒಳಮೀಸಲಾತಿ ಅವೈಜ್ಞಾನಿಕ ವರ್ಗೀಕರಣದ ತಾರತಮ್ಯ ನೀತಿ ಮತ್ತು ಇಬ್ಬಗೆಯ ಧೋರಣೆಯನ್ನೂ ಮುಖಂಡರು ಖಂಡಿಸಿದರು.



ಹೋರಾಟದಲ್ಲಿ ಬಂಜಾರ ಸಮುದಾಯದ ಜೀವನ ಶೈಲಿ ಹಾಗೂ ಹಿಂದಿನ ಪಾರಂಪರಿಕ ಪದ್ಧತಿಗಳು, ಸಾಂಪ್ರದಾಯಿಕ ಕಲೆ, ನೃತ್ಯ, ಭಜನೆ, ವಾಜಾ, ಧಾರ್ಮಿಕ ಪದ್ಧತಿಗಳನ್ನು ಈ ಹೋರಾಟದಲ್ಲಿ ಬಿಂಬಿಸುವುದರ ಮೂಲಕ ಸರ್ಕಾರದ ಗಮನ ಸೆಳೆಯಲಾಗುವುದೆಂದು ಕರ್ನಾಟಕ ಬಂಜಾರ ಲಂಬಾಣಿ ಹಕ್ಕು ಸಂರಕ್ಷಣಾ ಸಮಿತಿಯ ಪ್ರಧಾನ ಕಾರ್ಯದರ್ಶಿ ರವಿಕಾಂತ ಅಂಗಡಿ ತಿಳಿಸಿದರು.

ಬಂಜಾರ, ಕೊರಮ, ಕೊರಚ, ಭೋವಿ ಜಾತಿಗಳಿಗೆ ರಾಜ್ಯ ಸರ್ಕಾರ ಅನ್ಯಾಯವೆಸಗಿದೆ. ಒಳಮೀಸಲಾತಿಯ ವರ್ಗೀಕರಣದಲ್ಲಿ ನಮ್ಮ ಸಮುದಾಯಗಳಿಗೆ ಸಂಪೂರ್ಣವಾಗಿ ನ್ಯಾಯ ಸಿಗುವವರೆಗೆ ಹೋರಾಟವನ್ನು ಕೈಬಿಡುವುದಿಲ್ಲ ಎಂದು ರಾಜ್ಯ ಸರ್ಕಾರಕ್ಕೆ ಎಚ್ಚರಿಕೆಯ ಸಂದೇಶ ನೀಡಿದರು.

ಈ ಸಂದರ್ಭದಲ್ಲಿ ಸಮುದಾಯದ ಮುಖಂಡರಾದ ಕೆ.ಸಿ. ನಭಾಪುರ, ಶಿವಪುತ್ರಪ್ಪ ನಾಯಕ, ಶಿವಪ್ಪ ನಾಯಕ, ಟಿಕು ನಾಯಕ, ಕುಬೇರ ನಾಯಕ, ಚಂದು ನಾಯಕ, ಕಿಮಪ್ಪ ನಾಯ್ಕು, ನೂರಪ್ಪ ನಾಯಕ, ಮೀಟಪ್ಪ ನಾಯಕ, ಶ್ರೀನಿವಾಸ ನಾಯಕ, ಪುರಪ್ಪ ನಾಯಕ, ತೇಜ್ಯಾ ನಾಯಕ, ರಾಜು ನಾಯಕ, ಪಾಂಡಪ್ಪ ನಾಯಕ, ಸೋಮನಾಥ ನಾಯಕ, ಟಾಕರಪ್ಪ ನಾಯಕ, ಡಿ.ಎಲ್. ನಾಯಕ, ರೂಪಲೆಪ್ಪ ನಾಯಕ, ದೇವಾನಂದ ನಾಯಕ, ರಾಮಪ್ಪ ನಾಯಕ, ಶಿವಪ್ಪ ಕಾರಬಾರಿ, ನಾರಾಯಣ ಪೂಜಾರ, ಮಲ್ಲೇಶ್ ಕಾರಭಾರಿ, ನೀಲು ರಾಠೋಡ, ಐ.ಎಸ್. ಪೂಜಾರ, ಸೋಮು ಲಮಾಣಿ, ಚಂದ್ರಕಾಂತ ಚವ್ಹಾಣ, ಪರಮೇಶ ನಾಯಕ, ದನಸಿಂಗ ನಾಯಕ, ವಿಠ್ಠಲ ತೋಟದ, ಟಿ.ಡಿ. ಪೂಜಾರ, ಕುಬೇರಪ್ಪ ಪವಾರ, ಧನುರಾಮ ತಂಬೂರಿ, ಕುಬೇರಪ್ಪ ರಾಠೋಡ, ಪಾಂಡಪ್ಪ ಲಮಾಣಿ, ವಿಠ್ಠಲ ಕಾರಭಾರಿ, ನಾರಾಯಣ ಕಾರಭಾರಿ, ದೇವಪ್ಪ ಲಮಾಣಿ, ಧರ್ಮಸಿಂಗ ನಾಯಕ, ಗೋಪಾಲ ಪೂಜಾರ, ಕೇಶಪ್ಪ ಕಾರಭಾರಿ, ಪುರಪ್ಪ ಲಮಾಣಿ, ರಮೇಶ ಕಾರಭಾರಿ, ಶಿವಪ್ಪ ನಾಯಕ, ಸೋಮಪ್ಪಾ ಪೂಜಾರ, ಲಚ್ಚಪ್ಪ ಲಮಾಣಿ, ಧನುರಾಮ ಲಮಾಣಿ, ಕುಮಾರ್ ಕಾರಭಾರಿ, ಧಾಮಲೆಪ್ಪ ನಾಯಕ, ಸೋಮಶೇಖರ ಕಾರಭಾರಿ, ಭೀಮಪ್ಪ ಲಮಾಣಿ, ದುಗ್ಗಪ್ಪ ಲಮಾಣಿ, ಹರೀಶ ಲಮಾಣಿ, ಭೋಜಪ್ಪ ರಾಠೋಡ, ರಾಜಕುಮಾರ್ ಕಟ್ಟಿಮನಿ, ಬಾಬು ರಾಠೋಡ, ಗೋಪಾಲ ಲಮಾಣಿ, ರಾಘವೇಂದ್ರ ರಾಠೋಡ, ಸುರೇಶ್ ಪವಾರ, ಕೃಷ್ಣಪ್ಪ ಲಮಾಣಿ, ಚಂದ್ರಶೇಖರ್ ಲಮಾಣಿ, ಪರಶುರಾಮ ಲಮಾಣಿ, ಸುರೇಶ್ ಚವ್ಹಾಣ, ವಿಷ್ಣು ಕಾರಭಾರಿ, ಮೋಹನ ಪೂಜಾರ ಸೇರಿದಂತೆ ಗದಗ ಜಿಲ್ಲೆಯ ಎಲ್ಲಾ ತಾಂಡಾಗಳ ನಾಯಕ ಡಾವ ಕಾರಭಾರಿ, ಹಿರಿಯರು, ಸಂಘಟಕರು ಭಾಗವಹಿಸಿದ್ದರು.

### ಎಫ್‌ಎಕ್ಯೂ ಗುಣಮಟ್ಟದ ಹೆಸರುಕಾಳು ಹುಟ್ಟುವಳಿ ಖರೀದಿಗೆ ಬೆಂಬಲ ಬೆಲೆ ನಿಗದಿ

# ಖರೀದಿ ಸಂಸ್ಥೆಗಳ ದುರುಪಯೋಗವಾಗದಿರಲಿ

**■ ವಿಜಯಸಾಕ್ಷಿ ಸುದ್ದಿ, ಗದಗ**

2025 – 26ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತ–ರಿಂದ ಎಫ್.ಎ.ಕ್ಯೂ ಗುಣಮಟ್ಟದ ಹೆಸರುಕಾಳು ಹುಟ್ಟುವಳಿಯನ್ನು ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಧಿ ಕಾರಿಗಳ ಸಭಾಭವನದಲ್ಲಿ 2025–26ನೇ ಸಾಲಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಹೆಸರು ಹುಟ್ಟುವಳಿ ಖರೀದಿಸುವ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಪ್ರತಿ ರೈತರಿಂದ ಪ್ರತಿ ಎಕರೆಗೆ 3 ಕ್ವಿಂಟಲ್‌ನಂತೆ ಗರಿಷ್ಠ 15 ಕ್ವಿಂಟಲ್ ಎಫ್.ಎ.ಕ್ಯೂ ಗುಣಮಟ್ಟದ ಹೆಸರು ಖರೀದಿಸಲು ಹಾಗೂ ಹೆಸರು ಖರೀದಿ ಕೇಂದ್ರಗಳಲ್ಲಿ ರೈತರ ಹೆಸರಿನಲ್ಲಿ ವರ್ತಕರು ತರುವ ಹೆಸರುಕಾಳು ಉತ್ಪನ್ನವನ್ನು ಖರೀದಿಸದಂತೆ ಹಾಗೂ ಖರೀದಿ ಸಂಸ್ಥೆಗಳು ಯಾವುದೇ ರೀತಿಯ ದುರುಪಯೋಗವಾಗದಂತೆ ಎಲ್ಲ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ಸರ್ಕಾರದ ಮಾನದಂಡಗಳನ್ವಯ ಎಫ್.ಎ.ಕ್ಯೂ ಗುಣಮಟ್ಟವನ್ನು ದೃಢೀಕರಿಸಲು ಕ್ರಮ ವಹಿಸಬೇಕು. ಹೆಸರು ಕಾಳಿನ ಎಫ್.ಎ.ಕ್ಯೂ ಪ್ರಕ್ರಿಯೆಯಲ್ಲಿ ಗುಣಮಟ್ಟ ಪರಿಶೀಲನೆಗಾಗಿ ಲಭ್ಯವಿರುವ ಅಧಿಕಾರಿ/ಸಿಬ್ಬಂದಿಗಳನ್ನು ಬಳಸಿಕೊಳ್ಳಬೇಕು ಎಂದು ಅವರು ತಿಳಿಸಿದರು.

ಸರ್ಕಾರದ ಆದೇಶದನ್ವಯ ರಾಜ್ಯದಲ್ಲಿ ನಾಫೆಡ್ ಹಾಗೂ ಎನ್.ಸಿ.ಸಿ.ಎಫ್. (ಎನ್‌ಸಿಸಿಎಫ್) ಸಂಸ್ಥೆಯನ್ನು ಕೇಂದ್ರ ಸರ್ಕಾರದ ಖರೀದಿ ಸಂಸ್ಥೆಯನ್ನಾಗಿ ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ನಿಯಮಿತ ಬೆಂಗಳೂರು ಮತ್ತು ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿ ನಿಯಮಿತ ಕಲಬುರಗಿ ಸಂಸ್ಥೆಗಳನ್ನು ರಾಜ್ಯದ ವತಿಯಿಂದ ಖರೀದಿ ಸಂಸ್ಥೆಯನ್ನಾಗಿ ಗುರುತಿಸಲಾಗಿದೆ. ಗದಗ ಜಿಲ್ಲೆಯಲ್ಲಿ ಗದಗ ಹಾಗೂ ನರಗುಂದ ಮಾರ್ಕ್‌ಫೆಡ್ ಸಂಸ್ಥೆಯ ಶಾಖೆಗಳಿದ್ದು ಜಿಲ್ಲೆಯ ತಾಲೂಕುಗಳ ವ್ಯಾಪ್ತಿಯಲ್ಲಿ ಗ್ರಾಮೀಣ ಭಾಗದ ರೈತರಿಗೆ ಅನುಕೂಲವಾಗುವಂತೆ



ಎನ್.ಸಿ.ಸಿ.ಎಫ್. (ಎನ್‌ಸಿಸಿಎಫ್) ಮಾರ್ಗಸೂಚಿಯನ್ವಯ ಹಾಗೂ ತಾಂತ್ರಿಕ ಮತ್ತು ವೈಜ್ಞಾನಿಕ ಸೌಲಭ್ಯದಿಂದ ಕೂಡಿರುವ ಸದೃಢ PACS/OGCS/TAPCMS/FPO/Agricultural, Prodece Co operative Marketing Processing Societies ಸಂಸ್ಥೆಗಳ ಮುಖಾಂತರ ಒಡಂಬಡಿಕೆ ಮಾಡಿಕೊಂಡು ಖರೀದಿ ಕೇಂದ್ರಗಳನ್ನು ತೆರೆಯಲು ಎರಡು ಖರೀದಿ ಏಜೆನ್ಸಿಯ ಶಾಖೆಗಳಿಗೆ ಸೂಚಿಸಲಾಯಿತು.

**ಖರೀದಿ ಕೇಂದ್ರಗಳು:** ಗದಗ ತಾಲೂಕು (20)– PACS - PACS: ಮುಳಗುಂದ, ಬಳಗಾನೂರ, ಹರ್ಲಾಪುರ, ಶಿರೋಳ, ಕೋಟುಮಚಗಿ–1, ಹೊಂಬಳ, ನೀರಲಗಿ, ಕೋಟುಮಚಗಿ–2, ಸೊರಟೂರ, ಕದಡಿ, ಲಿಂಗದಾಳ, ಕಣಗಿನಹಾಳ, ಕುರ್ತಕೋಟಿ, ಬಿಂಕದಕಟ್ಟಿ, ನಾಗಾವಿ, ನಾಗಾವಿ ನಂ.2, (ಎಫ್.ಪಿ.ಓ): ಶ್ರೀ ಪ್ರಭುಸ್ವಾಮಿ ಹೊಂಬಳ, ಶ್ರಮಜೀವಿ ಹಿರೇಹಂದಿಗೋಳ, ಟಿಎಪಿಸಿಎಂಎಸ್ ಗದಗ, ಗದಗ ಕೋ–ಆಪ್ ಕಾಟನ್ ಸೇಲ್ ಸೊಸೈಟಿ, ಗದಗ.

**ಶಿರಹಟ್ಟಿ (3):** ಪಿಎಸಿಎಸ್ ಶಿರಹಟ್ಟಿ, ಟಿಎಪಿಸಿಎಂಎಸ್ ಶಿರಹಟ್ಟಿ, ಎಫ್.ಪಿ.ಓ ಬೆಳ್ಳಟ್ಟಿ.

**ಲಕ್ಷ್ಮೇಶ್ವರ (3):** ಪಿಎಸಿಎಸ್ ಯಳವತ್ತಿ, ಪಿಎಸಿಎಸ್ ಅಡರಕಟ್ಟಿ, ಟಿಎಪಿಸಿಎಂಎಸ್ ಲಕ್ಷ್ಮೇಶ್ವರ.

**ಮುಂಡರಗಿ (5):** ಪಿಎಸಿಎಸ್ ಆಲೂರ, ಪೇಠಾಲೂರ, ಬರದೂರ, ಶಿರೂರ, ಟಿಎಪಿಸಿಎಸ್ ಮುಂಡರಗಿ.

**ನರಗುಂದ (9):** ಪಿಎಸಿಎಸ್ ಚಿಕ್ಕನರಗುಂದ, ಸುರಕೋಡ, ಸಂಕದಾಳ, ಶಿರೋಳ, ಕೊಣ್ಣೂರ, ಹಿರೇಕೊಪ್ಪ, ಜಗಾಪೂರ, ಖಾನಾಪೂರ, ಗಂಗಾಪೂರ. ಟಿಎಪಿಸಿಎಂಎಸ್–ನರಗುಂದ.

**ರೋಣ (15):** ಪಿಎಸಿಎಸ್: ಹೊಸಳ್ಳಿ, ಮಲ್ಲಾಪೂರ, ರೋಣ–1, ರೋಣ–2, ಜಕ್ಕಲಿ, ಯಾವಗಲ್, ಕೌಜಗೇರಿ, ಬೆಳವಣಕಿ, ಸವಡಿ, ನಿಡಗುಂದಿ, ಅಬ್ಬಿಗೇರಿ, ಹೊಳೆ ಆಲೂರ, ಯಾ.ಸ.ಹಡಗಲಿ. ಟಿಎಪಿಸಿಎಂಎಸ್ ರೋಣ, ಎಫ್.ಪಿ.ಓ ಸವಡಿ.

**ಗಜೇಂದ್ರಗಡ (2):** ಟಿಎಪಿಸಿಎಂಎಸ್ ನರಗಲ್, ಟಿಎಪಿಸಿಎಂಎಸ್ ಗಜೇಂದ್ರಗಡ.

> ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರು ಮಾತನಾಡಿ, ಎಫ್.ಎ.ಕ್ಯೂ ಗುಣಮಟ್ಟದ ಹೆಸರು ಉತ್ಪನ್ನವನ್ನು ಪ್ರತಿ ಕ್ವಿಂಟಾಲ್‌ಗೆ ರೂ. 8768 ನಿಗದಿಪಡಿಸಲಾಗಿದೆ. ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ಸದರಿ ಆದೇಶ ಹೊರಡಿಸಿದ ದಿನಾಂಕದಿಂದ ರೈತರ ನೋಂದಣಿ ಕಾಲಾವಧಿಯನ್ನು 80 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರಗೆ ನಿಗದಿಪಡಿಸಲಾಗಿದೆ. ನೋಂದಣಿ ಕಾರ್ಯದ ಜೊತೆಗೆ ಖರೀದಿ ಪ್ರಕ್ರಿಯೆಯನ್ನು ಸಹ ಪ್ರಾರಂಭಿಸಿ ರಾಜ್ಯದಲ್ಲಿ ಮಾರ್ಕ್‌ಫೆಡ್ ಸಂಸ್ಥೆಯ ಮೂಲಕ ಖರೀದಿಸಲು ಆದೇಶಿಸಲಾಗಿದೆ ಎಂದು ತಿಳಿಸಿದರು.

# ಹಿರಿಯ ನಾಗರಿಕರ ದಿನಾಚರಣೆಯಲ್ಲಿ ಪಾಲ್ಗೊಳ್ಳಿ



**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಅಕ್ಟೋಬರ್ 1ರಂದು ಗದಗ ಜಿಲ್ಲಾಡಳಿತದಿಂದ ಜಿಲ್ಲಾಡಳಿತ ಭವನದಲ್ಲಿ ಹಿರಿಯ ನಾಗರಿಕರ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಅದರಲ್ಲಿ 80 ವರ್ಷದ ಮತ್ತು ಮೀರಿದ ಹಿರಿಯರನ್ನು ಗೌರವಿಸಲಾಗುತ್ತದೆ. ನಾವೆಲ್ಲರೂ ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳೋಣ ಎಂದು ನರೇಗಲ್ಲ ಸರಕಾರಿ ನೌಕರರ ಸಂಘದ ಅಧ್ಯಕ್ಷ ಡಿ.ಎ. ಅರವಟಗಿಮಠ ಹೇಳಿದರು.

ಪಟ್ಟಣದ ಹಿರೇಮಠದ ಸಭಾಭವನದಲ್ಲಿ ನಡೆದ ಹಿರಿಯ ನಾಗರಿಕರ ಮತ್ತು ಸರಕಾರಿ ನಿವೃತ್ತ ನೌಕರರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಮ್ಮ ಸಂಘದ ಎಸ್.ಕೆ. ಪಾಟೀಲರಿಗೂ ಅಂದು ಸನ್ಮಾನ ಜರುಗಲಿದೆ. ಸರಕಾರ ಕಮ್ಯುಟೇಷನ್ ಅವಧಿಯನ್ನು ಕಡಿಮೆ ಮಾಡುತ್ತಿದ್ದು, ಅರ್ಹ ಪಿಂಚಣಿದಾರರು ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಬೇಕಿದೆ. ಆದ್ದರಿಂದ, ಅರ್ಹರು ನಿಮ್ಮ ಅರ್ಜಿಗಳನ್ನು ಭರ್ತಿ ಮಾಡಿಕೊಡಿ ಎಂದರು.

ಸಭೆಯಲ್ಲಿ ಈಚೆಗೆ ನಿಧನರಾದ ಸಾಹಿತಿ ಎಸ್.ಎಲ್. ಬೈರಪ್ಪನವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ ಮಾತನಾಡಿ, ಬೈರಪ್ಪನವರು ಸಾಕ್ಷಾತ್ ಸರಸ್ವತಿಯ ಪುತ್ರರೇ ಆಗಿದ್ದರು. ಯಾವುದೇ ಕೃತಿಯನ್ನು ರಚನೆ ಮಾಡಬೇಕಿದ್ದರೂ ಅವರು ಅದರ ಬಗ್ಗೆ ಆಳವಾದ ಅಧ್ಯಯನ ಮಾಡಿ ಬರೆಯುತ್ತಿದ್ದರು. ಅವರ ಕೃತಿಗಳು ನಮ್ಮ ಜೀವನಕ್ಕೆ ದಾರಿದೀಪವಾಗಿವೆ ಎಂದರು. ಹಿರಿಯ ಸದಸ್ಯ ಡಾ. ಆರ್.ಕೆ. ಗಚ್ಚಿನಮಠ ಬೈರಪ್ಪನವರ 'ಯಾನ' ಕಾದಂಬರಿಯ ಕುರಿತು ಮಾತನಾಡಿದರು.

ಡಾ. ಕೆ.ಬಿ. ಧನ್ನೂರ ಮಾತನಾಡಿದರು. ಸಂಘದ ಕಾರ್ಯದರ್ಶಿ ವೀರಭದ್ರಪ್ಪ ಕೆರಿಯವರ ಪ್ರಾರ್ಥಿಸಿ, ಸಭೆಯ ನಡಾವಳಿಗಳನ್ನು ರೂಪಿಸಿದರು. ಶಿವಯೋಗಿ ಜಕ್ಕಲಿ ವಾರ್ಷಿಕ ವಂತಿಕೆಯ ಬಗ್ಗೆ ಸದಸ್ಯರ ಗಮನಕ್ಕೆ ತಂದರು. ಸಭೆಯಲ್ಲಿ ಎಸ್.ಕೆ. ಪಾಟೀಲ, ಎನ್.ಎಚ್. ಚಿಕ್ಕನಗೌಡ್ರ, ಸಿ.ಎ. ಅಂಗಡಿ, ಕೆ.ಕೆ. ದಾಸರ, ವಿ.ಬಿ. ಮೇಟಿ. ಆರ್.ಎಸ್. ಮಠ, ಕೆ.ಎಂ. ಸಂಗನಾಳ, ಎಚ್.ಕೆ. ಜೋಗಿ, ಬಿ.ವಿ. ಬಳಿಗೇರ, ಎಸ್.ಆರ್. ಬಾಗಲಿ, ವೈ.ಆರ್. ಬಸಾಪೂರ, ಎ.ಎ. ಹೊಟ್ಟಿನ, ಎಸ್.ಜಿ. ಮಾಲಗೌಡ್ರ, ಎಸ್.ಬಿ. ಹೊಸಮನಿ, ಎ.ಎಚ್. ಬೇವಿನಕಟ್ಟಿ, ಜಿ.ಎ. ಬೆಲ್ಲದ, ಬಿ.ಎ. ಕಲಾಲಬಂಡಿ, ಕರಬಸಪ್ಪ ಬಾಸಲಾಪರ ಮುಂತಾದವರಿದ್ದರು.

### ದುರ್ಗಾದೌಡ ಸ್ಥಾಪನಾ ಸಮಾರೋಪ ಕಾರ್ಯಕ್ರಮದಲ್ಲಿ ಶ್ರೀ ಬಸವರಾಜ ಸ್ವಾಮೀಜಿ

# ಹಬ್ಬಗಳು ನಮ್ಮ ಸಂಸ್ಕೃತಿಯ ಪ್ರತೀಕ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ದೇವರು, ಧರ್ಮ, ಸಂಸ್ಕಾರ, ಸಂಸ್ಕೃತಿ, ಸಂಪ್ರದಾಯ, ಮೌಲ್ಯಗಳನ್ನು ವಿಶ್ವಕ್ಕೆ ಹೇಳಿಕೊಟ್ಟ ದೇಶ ನಮ್ಮದಾಗಿದ್ದು, ಏನೆಲ್ಲ ಪ್ರಗತಿ ಸಾಧಿಸಿದ್ದರೂ ಈ ಮಾರ್ಗದಲ್ಲಿಯೇ ಮುನ್ನಡೆಯುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದು ಬೆಳ್ಳಟ್ಟಿಯ ರಾಮಲಿಂಗೇಶ್ವರಮಠದ ಶ್ರೀ ಬಸವರಾಜ ಮಹಾಸ್ವಾಮಿಗಳು ನುಡಿದರು.

ಅವರು ಪಟ್ಟಣದಲ್ಲಿ ಸೋಮವಾರ ದಸರಾ ಉತ್ಸವ ಸಮಿತಿ ವತಿಯಿಂದ 4ನೇ ವರ್ಷದ ದುರ್ಗಾದೌಡ ಸ್ಥಾಪನಾ ಸಮಾರೋಪ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ತಂತ್ರಜ್ಞಾನದ ಪ್ರಭಾವದಿಂದ ಯುವಶಕ್ತಿ ದುಶ್ಚಟಗಳ ದಾಸರಾಗಿ ನಮ್ಮತನವನ್ನು ಮರೆಯುತ್ತಿದ್ದಾರೆ. ಹಬ್ಬಗಳು ನಮ್ಮ ಸಂಸ್ಕೃತಿಯ ಪ್ರತೀಕವಷ್ಟೇ ಅಲ್ಲದೆ, ಜನರನ್ನು ಧರ್ಮ ಮಾರ್ಗದಲ್ಲಿ ಸಾಗಿಸುತ್ತವೆ. ದೇವರ ಬಗ್ಗೆ ಎಲ್ಲರಲ್ಲೂ ನಂಬಿಕೆ, ವಿಶ್ವಾಸ ಬೇಕು. ದೇವಸ್ಥಾನಗಳಲ್ಲಿ



ಪಾವಿತ್ರ್ಯತೆ ಕಾಪಾಡಿ ನಿತ್ಯ ಪೂಜೆ, ಪ್ರಾರ್ಥನೆ ನಡೆಯಬೇಕು. ದುರ್ಗಾದೌಡ ಧರ್ಮ ಜಾಗೃತಿಯ ಹಬ್ಬವಾಗಿದ್ದು, ಅದನ್ನು ಭಕ್ತಿಯಿಂದ ಆಚರಿಸಿದಾಗ ಸತ್ಫಲ, ಬದುಕಿನಲ್ಲಿ ನೆಮ್ಮದಿ, ಶಾಂತಿ ಪ್ರಾಪ್ತವಾಗುತ್ತದೆ. ಧಾರ್ಮಿಕ ಚಿಂತಕ ಗುರುನಾಥ ದಾನಪ್ಪನವರ ಅವರು ಪ್ರತಿವರ್ಷ ಇಂತಹ ಧಾರ್ಮಿಕ ಕಾರ್ಯವನ್ನು ಆಚರಿಸಿಕೊಂಡು ಬರುತ್ತಿರುವದು ನಾಡಿಗೆ ಒಳ್ಳೆಯ ಸಂದೇಶವಿದ್ದಂತೆ ಎಂದು ನುಡಿದರು.

ದಸರಾ ಉತ್ಸವ ಸಮಿತಿ ಮುಖ್ಯಸ್ಥ ಹಾಗೂ ದುರ್ಗಾದೌಡ ಕಾರ್ಯಕ್ರಮದ ಯಶಸ್ವಿಯ ರೂವಾರಿ ಗುರುನಾಥ ದಾನಪ್ಪನವರ ಮಾತನಾಡಿ, ಪ್ರಸ್ತುತ ದಿನಮಾನಗಳಲ್ಲಿ ಧಾರ್ಮಿಕ ಮೌಲ್ಯ ಹೆಚ್ಚಿಸುವ, ಧರ್ಮ ಜಾಗೃತಿ, ಧಾರ್ಮಿಕ ಕಲ್ಪನೆಗಳು ಉಳಿಯಬೇಕು ಎನ್ನುವ ಉದ್ದೇಶವು ಈ ದುರ್ಗಾದೌಡ ಕಾರ್ಯಕ್ರಮದ್ದಾಗಿದೆ. ಇದರಲ್ಲಿ ಎಲ್ಲರೂ ಸ್ವಯಂ ಪ್ರೇರಣೆಯಿಂದ, ಸಮಭಾವದಿಂದ ಪಾಲ್ಗೊಳ್ಳುತ್ತಿರುವುದು ಸಂತಸದ ಸಂಗತಿಯಾಗಿದೆ ಎಂದರು.

ದಸರಾ ಉತ್ಸವ ಸಮಿತಿ ಅಧ್ಯಕ್ಷ ಮಲ್ಲನಗೌಡ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಬಸವರಾಜ ಅರಳಿ, ಪುರಸಭೆ ಸದಸ್ಯರುಗಳಾದ ಪ್ರವೀಣ ಬಾಳಿಕಾಯಿ, ಅಶ್ವಿನಿ ಅಂಕಲಕೋಟಿ, ಪೂಜಾ ಖರಾಟೆ, ಶೋಭಾ ಮೆಣಸಿನಕಾಯಿ, ತಿಪ್ಪಣ್ಣ ಸಂಶಿ, ಗುರುರಾಜ ಪಾಟೀಲಕುಲಕರ್ಣಿ, ಬಸವೇಶ ಮಹಾಂತಶೆಟ್ಟರ, ಸಿದ್ದನಗೌಡ ಬಳ್ಳೊಳ್ಳಿ, ರಾಘವೇಂದ್ರ ಪೂಜಾರ, ಎಂ.ಎನ್. ಬಾಡಗಿ, ಗಂಗಾಧರ ಮೆಣಸಿನಕಾಯಿ ಸೇರಿದಂತೆ ಅನೇಕರಿದ್ದರು. ರಾಜು ಅರಳಿ ಪ್ರಾಸ್ತಾವಿಕ ನುಡಿದರು. ರವಿ ಲಿಂಗಶೆಟ್ಟಿ ನಿರೂಪಿಸಿದರು.

# ಅರಿವು ಕೇಂದ್ರಗಳು ಕಲಿಕೆಗೆ ಪೂರಕ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ವಿದ್ಯಾರ್ಥಿಗಳು ಓದುವ ಹವ್ಯಾಸವನ್ನು ಹೆಚ್ಚಿಸಿಕೊಂಡು ಜ್ಞಾನವನ್ನು ಬೆಳೆಸಿಕೊಳ್ಳಬೇಕಾಗಿದೆ. ಈ ನಿಟ್ಟಿನಲ್ಲಿ ಅರಿವು ಕೇಂದ್ರವು ವಿದ್ಯಾರ್ಥಿಗಳ ಪ್ರತಿಭೆಗಳನ್ನು ಅನಾವರಣಗೊಳಿಸುವ ಉತ್ತಮ ವೇದಿಕೆಯಾಗಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಲಕ್ಷ್ಮೇಶ್ವರ ತಾಲೂಕಿನ ಹದರಗಟ್ಟಿ ಗ್ರಾಮದಲ್ಲಿ ಗ್ರಂಥಾಲಯದ ಡಿಜಿಟಲ್ ರೂಪದ ಅರಿವು ಉಪ ಕೇಂದ್ರ ಉದ್ಘಾಟನೆ ನೆರವೇರಿಸಿ ಮಾತನಾಡಿದರು.


ಅರಿವು ಕೇಂದ್ರಗಳು ವಿದ್ಯಾರ್ಥಿಗಳಿಗೆ ಜ್ಞಾನದ ಭಂಡಾರ, ಕಲಿಕೆಯ ಕೇಂದ್ರ ಮತ್ತು ಭವಿಷ್ಯ ರೂಪಿಸುವ ಸ್ಥಳವಾಗಿವೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಅಧ್ಯಯನ ಸಾಮಗ್ರಿ, ಡಿಜಿಟಲ್ ಸಂಪನ್ಮೂಲಗಳು ಮತ್ತು ತರಬೇತಿ ಒದಗಿಸುವ ಮೂಲಕ ಅವರ ಕಲಿಕೆಗೆ ಪೂರಕವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾ.ಪಂ ಪಿಡಿಓ ಸವಿತಾ ಸೋಮಣ್ಣವರ, ಗ್ರಾ.ಪಂ ಅಧ್ಯಕ್ಷೆ ಪ್ರೇಮಾ ಮಾನಪ್ಪ ನಾಯಕ, ಠಾಕರಪ್ಪ



ಮಾಳಗಿಮನಿ, ನಿಂಗಪ್ಪ ಪ್ಯಾಟಿ, ಸೋಮಪ್ಪ ನಾಯಕ, ಧರ್ಮಪ್ಪ ಲಮಾಣಿ, ದೇವಪ್ಪ ಲಮಾಣಿ, ಪಾಂಡಪ್ಪ ರಜಪೂತ, ರಮೇಶ್ ಲಮಾಣಿ, ಶಂಕರ ಕಾರಭಾರಿ, ಪರಮೇಶ ಲಮಾಣಿ, ಮಾನಪ್ಪ ನಾಯಕ, ಸುಭಾಷ ಗುಡಿಮನಿ, ದೇವಪ್ಪ ಲಮಾಣಿ, ದೇವಪ್ಪ ಇಟಗಿ, ಅಕ್ಷಿರಾವ ಇಟಗಿ, ಲಕ್ಷ್ಮಣ ಪೂಜಾರ, ಗೋವಿಂದ ತಳವಾರ, ಸುರೇಶ ಮಾಳಗಿಮನಿ, ರವಿ ಮಾಲಗಿಮನಿ, ಬಸವರಾಜ ಲಮಾಣಿ, ಹನುಮಂತಪ್ಪ ಲಮಾಣಿ, ನಜೀರ ತಾಡಪತ್ರಿ, ರೋಹನ ಲಮಾಣಿ ಅವಿನಾಶ ಲಮಾಣಿ, ಲಕ್ಷ್ಮಣ ಕಾರಭಾರಿ, ಗ್ರಾ.ಪಂ ಸದಸ್ಯರು, ಸ್ಥಳೀಯ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ನಮ್ಮೊಳಗಿನ ಶತ್ರುಗಳೇ ಅಸುರರು



**■ ವಿಜಯಸಾಕ್ಷಿ ಸುದ್ದಿ, ಗದಗ**

ನವರಾತ್ರಿ ಹಬ್ಬ ನಮಗೆಲ್ಲಾ ನವಶಕ್ತಿಯನ್ನು ತುಂಬುವ ಹಬ್ಬ. ದುರ್ಗೆ, ಕಾಳಿ, ಅಂಬಾಭವಾನಿ ಮೊದಲಾದ ದೇವಿಯರೆಲ್ಲ ಶಿವನಿಂದ ಶಕ್ತಿ ಪಡೆದು ಅಸುರರನ್ನು ಸಂಹರಿಸಿದ ಕಥೆಗಳಿವೆ. ಇಲ್ಲಿ ಅಸುರರು ಅಂದರೆ ನಮ್ಮ ಒಳಗಿರುವ ಶತ್ರುಗಳು. ಇವುಗಳನ್ನು ನಾಶ ಮಾಡುವುದು ಅಷ್ಟು ಸುಲಭವಲ್ಲ. ಒಳಗಿರುವ ವಿಕಾರಿ ಗುಣಗಳೆನ್ನುವ ರಾಕ್ಷಸರನ್ನು ಸುಟ್ಟು ಹಾಕಬೇಕಾದರೆ ಯೋಗಾಗ್ನಿಯಿಂದ ಮಾತ್ರ ಸಾಧ್ಯ. ಆದ್ದರಿಂದ ನಾವೆಲ್ಲರೂ ಶಿವಶಕ್ತಿಯರಾಗೋಣ. ಅಲ್ಪಕಾಲದ ಜೀವನದಲ್ಲಿ ಸದಾಕಾಲದ ಸುಖ, ಶಾಂತಿ ಪಡೆಯೋಣ ಎಂದು ಈಶ್ವರೀಯ ವಿಶ್ವವಿದ್ಯಾಲಯದ ಸಂಚಾಲಕರಾದ ರಾಜಯೋಗಿನಿ ಬ್ರಹ್ಮಕುಮಾರಿ ಜಯಂತಿ ಅಕ್ಕನವರು ಸಂದೇಶ ನೀಡಿದರು.

ನವರಾತ್ರಿ ಪ್ರಯುಕ್ತ ಅಧ್ಯಾತ್ಮಿಕ ಸಂಸ್ಕೃತಿ ಭವನ, ಸಿದ್ಧರಾಮೇಶ್ವರ ನಗರ ಹಾಗೂ ಬೆಟಗೇರಿಯ ಹಳೇ ಬನಶಂಕರಿ ದೇವಿ ಸಮುದಾಯ ಭವನದಲ್ಲಿ ಏರ್ಪಡಿಸಿದ್ದ ಚೈತನ್ಯ ದೇವಿಯರ ದರ್ಶನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ರಾಜೇಂದ್ರ ಫಕೀರಪ್ಪ ಭರದ್ವಾಡ, ಬಸಪ್ಪ ಗುತ್ತಿ, ವಿಷ್ಣು ಶಂಕರಪ್ಪ ಅಸುಂಡಿ, ದೇವೆಂದ್ರಪ್ಪ ಚೂರಿ, ಬಿ.ಕೆ. ರೇಖಾ, ಬಿ.ಕೆ. ಸಾವಿತ್ರಿ ಮುಂತಾದವರಿದ್ದರು.

# ಡಾ. ಕಲಬುರ್ಗಿಯವರಿಗೆ ಮರಣೋತ್ತರ ಪ್ರಶಸ್ತಿ

▶▶ ಮೊದಲನೇ ಪುಟದಿಂದ

ಅವರು ಬದುಕಿನುದ್ದಕ್ಕೂ ಮಾಡಿದ ಕಾರ್ಯ, ತೋರಿದ ದಾರಿ, ಬೀರಿದ ಪ್ರಭಾವ ನಾಡಿನ ಜನತೆಗೆ ಬೆರಗು ಹುಟ್ಟಿಸುವಂತಹವು. ಅವರದು ಸತ್ಯನಿಷ್ಠತೆ, ನ್ಯಾಯ–ನಿಷ್ಠುರತೆಯ ತತ್ವಬದ್ಧ ಬದುಕಾಗಿತ್ತು.

ಅವರು ಕನ್ನಡ ಮತ್ತು ಬಸವಣ್ಣ ತಮ್ಮ ಪ್ರಾಣ ಜೀವಾಳವೆಂದು ನಂಬಿದ್ದರು. ಸತ್ಯ – ತತ್ವ – ಸಮಾಜಕ್ಕಾಗಿ ಪ್ರಾಣವನ್ನು ಪಣವಾಗಿ ಇಟ್ಟವರು. ಈ ಪ್ರಶಸ್ತಿ 5 ಲಕ್ಷ ರೂ ಮೊತ್ತ ಹಾಗೂ ಪ್ರಶಸ್ತಿ ಫಲಕವನ್ನು ಒಳಗೊಂಡಿದೆ. ಪ್ರಶಸ್ತಿಯನ್ನು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳವರ ಸನ್ನಿಧಿಯಲ್ಲಿ ಡಾ. ಎಂ.ಎಂ. ಕಲಬುರ್ಗಿ ಅವರ ಧರ್ಮಪತ್ನಿ ಉಮಾದೇವಿ ಎಂ.ಕಲಬುರ್ಗಿ ಇವರು ಸ್ವೀಕರಿಸುವರು ಎಂದು ಮಾಹಿತಿ ನೀಡಿದರು.

## ನಿಧನ



**ಸೋಮಶೇಖರಪ್ಪ ಅಂಗಡಿ**

ನರೇಗಲ್ಲ: ಪಟ್ಟಣದ ಕೋಡಿಕೊಪ್ಪದ ಶ್ರೀ ಅನ್ನದಾನೇಶ್ವರ ನಗರದ ನಿವಾಸಿ, ನಿವೃತ್ತ ಶಿಕ್ಷಕ ಸೋಮಶೇಖರಪ್ಪ ದೊಡ್ಡಬಸಪ್ಪ ಅಂಗಡಿ (86) ಸೋಮವಾರ ಬೆಳಿಗ್ಗೆ ನಿಧನರಾದರು. ಅವರು ಇಬ್ಬರು ಗಂಡು ಮಕ್ಕಳು, ಮೊಮ್ಮಕ್ಕಳು ಮತ್ತು ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.

# ಉಪನ್ಯಾಸಕ ಎಂ.ಸಿ. ಭಜಂತ್ರಿಗೆ ಜಿಲ್ಲಾ ಉತ್ತಮ ಶಿಕ್ಷಕ ಪ್ರಶಸ್ತಿ

**■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶಿರಹಟ್ಟಿಯ ಎಫ್.ಎಂ. ಡಬಾಲಿ ಪದವಿಪೂರ್ವ ಕಾಲೇಜಿನ ಇಂಗ್ಲಿಷ್ ಉಪನ್ಯಾಸಕ ಎಂ.ಸಿ. ಭಜಂತ್ರಿ ಇವರಿಗೆ ಕಪ್ಪತ್ತಗಿರಿ ಫೌಂಡೇಶನ್ ಸಾಹಿತ್ಯ, ಶಿಕ್ಷಣ, ಮತ್ತು ಸಾಂಸ್ಕೃತಿಕ ಕಲಾವೇದಿಕೆ ಕಳಸಾಪೂರ ಗದಗ ಇವರ ವತಿಯಿಂದ ಭಾನುವಾರ ಜರುಗಿದ ಶಿಕ್ಷಕ ದಿನಾಚರಣೆಯ ಕಾರ್ಯಕ್ರಮದಲ್ಲಿ 'ಜಿಲ್ಲಾ ಉತ್ತಮ ಶಿಕ್ಷಕ' ಪ್ರಶಸ್ತಿ ನೀಡಿ ಗೌರವಿಸಲಾಗಿದೆ.



ವಿದ್ಯಾರ್ಥಿಗಳ ಭವಿಷ್ಯದ ಒಳಿತಿಗಾಗಿ ಸಲ್ಲಿಸಿದ ಅಮೋಘ ಸೇವೆ, ಕರ್ತವ್ಯ ನಿಷ್ಠೆ, ಸಮಯಪ್ರಜ್ಞೆ ಹಾಗೂ ವಿದ್ಯಾರ್ಥಿಗಳಲ್ಲಿ ನಾವೀನ್ಯಯುತ ಬೋಧನೆಯ ಜೊತೆಗೆ ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು, ಪ್ರೇರಣೆ ನೀಡಿದ್ದಕ್ಕೆ ಅಭಿನಂದನಾ ಪತ್ರದ ಜೊತೆಗೆ ಸನ್ಮಾನಿಸಿ ಗೌರವಿಸಲಾಗಿದೆ.

**ಜಲಸಂಚಾಯಿ, ಜನ ಭಾಗಿದಾರಿ 1.0 ಅಭಿಯಾನದಲ್ಲಿ ಗದಗ ಜಿಲ್ಲೆ ರಾಜ್ಯಕ್ಕೆ ಪ್ರಥಮ । ದೇಶದಲ್ಲಿ 4ನೇ ಸ್ಥಾನ, 25 ಲಕ್ಷ ರೂ. ಬಹುಮಾನ**

# ಜಲಸಂರಕ್ಷಣೆಯಲ್ಲಿ ಒಗ್ಗಟ್ಟಿನ ಶಕ್ತಿ–ಜಲಯಾತ್ರೆಗೆ ಹೊಸ ಉತ್ಸಾಹ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಲಶಕ್ತಿ ಅಭಿಯಾನದ ಅಂಗವಾಗಿ ಜಲಸಂಚಾಯಿ ಜನಭಾಗಿದಾರಿ 1.0 ಕಾರ್ಯಕ್ರಮದಡಿ ಗದಗ ಜಿಲ್ಲೆಯು ಜಲ ಸಂರಕ್ಷಣೆ ಅಡಿಯಲ್ಲಿ ಐತಿಹಾಸಿಕ ಸಾಧನೆ ಮಾಡುವ ಮೂಲಕ ಕರ್ನಾಟಕದಲ್ಲಿ ಪ್ರಥಮ ಸ್ಥಾನ ಗಳಿಸಿ ಪ್ರಶಂಸೆಗೆ ಪಾತ್ರವಾಗಿದೆ. ದೇಶದ 780 ಜಿಲ್ಲೆಗಳಲ್ಲಿ ಜೋನ್ 3 ಕೆಟಗರಿ 3ರಲ್ಲಿ 4ನೇ ಸ್ಥಾನ ಪಡೆದು, 25 ಲಕ್ಷ ರೂ.ಗಳ ನಗದು ಬಹುಮಾನಕ್ಕೆ ಭಾಜನವಾಗಿದೆ.

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ಮನರೇಗಾ) ಸೇರಿದಂತೆ ಇತರ ಯೋಜನೆಗಳಡಿ, ಗದಗ ಜಿಲ್ಲೆಯು 01–04–2024ರಿಂದ 31–03–2025ರವರೆಗೆ 11,971 ಜಲಸಂರಕ್ಷಣೆ ಕಾಮಗಾರಿಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ, ಜಲಸಂಚಾಯಿ ಪೋರ್ಟಲ್‌ನಲ್ಲಿ ದಾಖಲಿಸಿದ್ದು, ಇವುಗಳಲ್ಲಿ 11,329 ವೈಯಕ್ತಿಕ ಮತ್ತು ಸಮುದಾಯ ಬದು ನಿರ್ಮಾಣಗಳು, 75 ಬೋರ್‌ವೆಲ್ ರೀಚಾರ್ಜ್‌ಗಳು, 60 ಸೋಕ್‌ಪಿಟ್‌ಗಳು, 465 ಮಳೆನೀರು ಕೊಯ್ಲು ಕಾಮಗಾರಿಗಳು, 10 ಚೆಕ್ ಡ್ಯಾಂಗಳು ಮತ್ತು 32 ಗಲ್ಲಿ ಪ್ಲಗ್‌ಗಳು ಸೇರಿವೆ. ಈ ಕಾಮಗಾರಿಗಳು ಗದಗ ಜಿಲ್ಲೆಯ ಜಲ ಸಂರಕ್ಷಣೆಯ ಚಿತ್ರಣವನ್ನೇ ಬದಲಾಯಿಸಿವೆ.

ಕೇಂದ್ರ ನೋಡಲ್ ಆಫೀಸರ್ ತಂಡವು 16–06–2025ರಿಂದ 21–06–2025ರವರೆಗೆ ಗದಗ ಜಿಲ್ಲೆಯಲ್ಲಿ ಶೇ. 1 ಸ್ಥಳ ಪರಿಶೀಲನೆ ನಡೆಸಿ, ಕಾಮಗಾರಿಗಳ ಗುಣಮಟ್ಟಕ್ಕೆ ಮೆಚ್ಚುಗೆ ವ್ಯಕ್ತಪಡಿಸಿತು. ಶೇ. 99 ಡೆಸ್ಕ್‌ಟಾಪ್ ಮೌಲ್ಯಮಾಪನದಲ್ಲಿಯೂ ಈ ಕಾಮಗಾರಿಗಳು ಉನ್ನತ ಮಾನದಂಡಗಳನ್ನು ಪೂರೈಸಿವೆ ಎಂದು ದಾಖಲಾಗಿದೆ. ಈ ಸಾಧನೆಯು ಗದಗ ಜಿಲ್ಲೆಯನ್ನು ಕರ್ನಾಟಕದಲ್ಲಿ ಮೊದಲ ಸ್ಥಾನಕ್ಕೆ ಒಯ್ಯುವುದು ಮಾತ್ರವಲ್ಲದೆ, ದೇಶದಲ್ಲಿ ಜೋನ್ 3 ಕೆಟಗರಿ 3ರಲ್ಲಿ 4ನೇ ಸ್ಥಾನವನ್ನು ಗಳಿಸುವಂತೆ ಮಾಡಿದೆ. ಈ ಅಭಿಯಾನದ ಯಶಸ್ಸಿಗೆ ಜಿಲ್ಲಾಧಿಕಾರಿಗಳು, ಉಪವಿಭಾಗ ಅಧಿಕಾರಿಗಳು, ತಾ.ಪಂ ಕಾರ್ಯ ನಿರ್ವಾಹಕ ಅಧಿಕಾರಿಗಳು, ಜಿ.ಪಂ ಅಭಿವೃದ್ಧಿ ಅಧಿಕಾರಿಗಳು, ಮನರೇಗಾ ಯೋಜನೆಯ ಸಹಾಯಕ ಕಾರ್ಯಕ್ರಮ ಸಮನ್ವಯ ಅಧಿಕಾರಿ ಕಿರಣಕುಮಾರ್ ಮತ್ತು ಅವರ ತಂಡ, ಜಿಲ್ಲೆಯ ಡಿಇಓ ರವರ ಅವಿರತ ಶ್ರಮವೇ ಕಾರಣವಾಗಿದ್ದು, ಜಲಸಂರಕ್ಷಣೆಯಲ್ಲಿ ಒಗ್ಗಟ್ಟಿನ ಶಕ್ತಿಯನ್ನು ಸಾರಿದೆ.

ಕೇಂದ್ರ ಸರ್ಕಾರದಿಂದ ಘೋಷಿತವಾದ 25 ಲಕ್ಷ ರೂ.ಗಳ ಬಹುಮಾನವು ಗದಗ ಜಿಲ್ಲೆಯ ಈ ಜಲಯಾತ್ರೆಗೆ ಹೊಸ ಉತ್ಸಾಹ ತುಂಬಿದೆ. ಈ ಸಾಧನೆಯು ಗದಗ ಜಿಲ್ಲೆಯನ್ನು ಜಲ ಸಂರಕ್ಷಣೆಯಲ್ಲಿ ರಾಷ್ಟ್ರಮಟ್ಟದ ಗಮನಕ್ಕೆ ತಂದಿದೆ, ಜೊತೆಗೆ ಭವಿಷ್ಯದಲ್ಲಿ ಇನ್ನಷ್ಟು ಕಾಮಗಾರಿಗಳಿಗೆ ಪ್ರೇರಣೆಯಾಗಿದೆ.

> ಜಲಸಂಚಾಯಿ ಜನಭಾಗಿದಾರಿ ಅಭಿಯಾನದಲ್ಲಿ ಕರ್ನಾಟಕದಲ್ಲೇ ಗದಗ ಜಿಲ್ಲೆಗೆ ಪ್ರಥಮ ಸ್ಥಾನ ಬಂದಿರುವುದು ಸಂತಸ ತಂದಿದೆ. ಅಂತರ್ಜಲ ಮಟ್ಟ ಹೆಚ್ಚಳ ಮತ್ತು ಪರಿಸರ ಸಂರಕ್ಷಣೆ ಕುರಿತು ಜಿಲ್ಲೆಯ ಅಧಿಕಾರಿಗಳು ಶ್ರಮವಹಿಸಿ ಹಲವು ಕಾಮಗಾರಿಗಳನ್ನು ಅನುಷ್ಠಾನ ಮಾಡಿರುವುದು ಪ್ರಶಂಸನೀಯ. ಪ್ರಥಮ ಸ್ಥಾನ ಬಂದಿರುವುದಕ್ಕೆ ಜಿಲ್ಲೆಗೆ ನಗದು ರೂಪದಲ್ಲಿ 25 ಲಕ್ಷ ಅನುದಾನ ನೀಡುತ್ತಿದ್ದಾರೆ. ಬರುವ ಅನುದಾನವನ್ನು ಅಭಿಯಾನದ ಉದ್ದೇಶ ಈಡೇರಿಕೆಗೆ ಬಳಸಿಕೊಳ್ಳಲು ಶ್ರಮಿಸಲಾಗುವುದು.
>
> **– ಸಿ.ಎನ್. ಶ್ರೀಧರ.**
> **ಜಿಲ್ಲಾಧಿಕಾರಿಗಳು, ಗದಗ.**



> ಜಿಲ್ಲೆಯಲ್ಲಿ ಅಂತರ್ಜಲ ಮಟ್ಟ ಹೆಚ್ಚಿಸುವ ಉದ್ದೇಶದಿಂದ ಬದು ನಿರ್ಮಾಣ ಕಾಮಗಾರಿ, ಚೆಕ್ ಡ್ಯಾಂ ನಿರ್ಮಾಣ, ಬೋರ್‌ವೆಲ್ ರಿಚಾರ್ಜ್ ಕಾಮಗಾರಿ ಸೇರಿದಂತೆ ಹಲವು ಪರಿಸರ ಸ್ನೇಹಿ ಕಾಮಗಾರಿಗಳನ್ನು ಅನುಷ್ಠಾನ ಮಾಡಲಾಗಿದೆ. ಕೇಂದ್ರ ಅಧ್ಯಯನ ತಂಡದ ಪರಿಶೀಲನೆ ಸಂದರ್ಭದಲ್ಲಿ ಜಿಲ್ಲೆಯ ಕಾಮಗಾರಿಗಳ ಗುಣಮಟ್ಟದ ಬಗ್ಗೆ ತಂಡವು ಮೆಚ್ಚುಗೆ ವ್ಯಕ್ತಪಡಿಸಿದೆ.
>
> **– ಸಿ.ಆರ್. ಮುಂಡರಗಿ.**
> **ಜಿ.ಪಂ ಉಪಕಾರ್ಯದರ್ಶಿ.**

> ಮೇಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಅತೀ ಹೆಚ್ಚು ಕಾಮಗಾರಿಗಳನ್ನು ಜಿಲ್ಲೆಯಲ್ಲಿ ಅನುಷ್ಠಾನಿಸಿರುವುದರಿಂದ ಈ ಪ್ರಶಸ್ತಿ ಬಂದಿದೆ. ಇದಕ್ಕೆ ಪೂರಕವಾಗಿ ಇನ್ನಷ್ಟು ಕಾಮಗಾರಿಗಳನ್ನು ವೈಜ್ಞಾನಿಕವಾಗಿ ಮನರೇಗಾ ಯೋಜನೆಯಡಿಯಲ್ಲಿ ಕ್ರಿಯಾಯೋಜನೆ ನಿಯಮನುಸಾರ ತಯಾರಿಸಿ, ಅನುಮೋದನೆ ತೆಗೆದುಕೊಂಡು ಇನ್ನು ಹೆಚ್ಚಿನ ಕ್ರಿಯಾತ್ಮಕ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಕ್ರಮವಹಿಸಲಾಗುವುದು.
>
> **– ಕಿರಣಕುಮಾರ್ ಎಸ್.ಹೆಚ್. ಸಹಾಯಕ ಜಿಲ್ಲಾ ಕಾರ್ಯಕ್ರಮ ಸಮನ್ವಯಾಧಿಕಾರಿ. ಜಿ.ಪಂ ಮನರೇಗಾ ವಿಭಾಗ.**

> ನೀರಿಗಾಗಿ ಒಂದಾಗಿ 'ಪ್ರತಿ ಹನಿ ನೀರನ್ನು ಸಂರಕ್ಷಿಸಿ' ಎಂಬ ಧ್ಯೇಯದೊಂದಿಗೆ ಜಲಸಂಚಾಯಿ ಜನಭಾಗಿದಾರಿ 1.0 ಅಭಿಯಾನವು ಅಂತರ್ಜಲ ಮಟ್ಟವನ್ನು ಹೆಚ್ಚಿಸುವುದು, ಮಳೆ ನೀರನ್ನು ಸಂಗ್ರಹಿಸುವುದು, ಜಲ ಸಂರಕ್ಷಣೆಯ ಸಂಸ್ಕೃತಿಯನ್ನು ಬೆಳೆಸುವುದು, ಹವಾಮಾನ ಸ್ಥಿತಿಗತಿಯನ್ನು ಉತ್ತೇಜಿಸುವುದು ಮತ್ತು ನೀರಿನ ಗುಣಮಟ್ಟವನ್ನು ಸುಧಾರಿಸುವ ಗುರಿಯನ್ನು ಹೊಂದಿದೆ. ಸ್ಥಳೀಯ ಸಮುದಾಯ, ಸರ್ಕಾರಿ ಸಂಸ್ಥೆಗಳು ಮತ್ತು ಎನ್.ಜಿ.ಓಗಳ ಸಹಯೋಗದಿಂದ ಈ ಕಾರ್ಯಕ್ರಮವು ನೀರಿನ ಕೊರತೆಯ ಸವಾಲಿಗೆ ಸಮರ್ಥ ಪರಿಹಾರವನ್ನು ಹುಡುಕುವುದಾಗಿದೆ.

# ಸತತ ಮಳೆಗೆ ಕೊಳೆತ ಶೇಂಗಾ ಬೆಳೆ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಸತತವಾಗಿ ಸುರಿದ ಉತ್ತರಾ ಮಳೆಗೆ ಕಟಾವು ಮಾಡಲಾಗಿದ್ದ ಶೇಂಗಾ ಬೆಳೆ ಕೊಳೆಯುತ್ತಿದ್ದು, ಇನ್ನೂ ಕೆಲವೆಡೆ ಮೊಳಕೆಯೊಡೆಯುತ್ತಿದೆ. ಕೈಗೆ ಬಂದ ತುತ್ತು ಬಾಯಿಗೆ ಬಾರದಂತಾಗಿ ರೈತರಲ್ಲಿ ಆರ್ಥಿಕ ಸಂಕಷ್ಟ ನಿರ್ಮಾಣವಾಗುತ್ತಿದೆ.

ಸತತ ಮೂರು ವರ್ಷಗಳಿಂದ ರೈತರು ಸಂಕಷ್ಟಕ್ಕೀಡಾಗುತ್ತಿದ್ದು, ಮುಂಗಾರು ಮಳೆ ಉತ್ತಮ ಆರಂಭದಿಂದ ಉತ್ತಮ ಬೆಳೆ ನಿರೀಕ್ಷೆಯಲ್ಲಿದ್ದ ರೈತರಿಗೆ ಗಾಯದ ಮೇಲೆ ಬರೆ ಬೀಳುತ್ತಿದೆ. ಹೆಸರು ಬೆಳೆ ಸಂಪೂರ್ಣವಾಗಿ ಹಾಳಾಗಿದ್ದು, ಈಗ ಶೇಂಗಾ ಬೆಳೆಯೂ ಕೈಕೊಟ್ಟಿದೆ. ಈಗಾಗಲೇ ಕಟಾವು ಮಾಡಿ ಹೊಲದಲ್ಲಿ ರಾಶಿ ಹಾಕಿದ್ದ ಬಹುತೇಕ ಶೇಂಗಾ ಬಳ್ಳಿ ಕೊಳೆತು ಹೋಗಿದೆ. ಬಳ್ಳಿಗಳಲ್ಲೇ ಮೊಳಕೆಯೊಡೆಯುತ್ತಿದ್ದು, ಜಾನುವಾರುಗಳಿಗೆ ಮೇವಿನ ಕೊರತೆಯೂ ಎದುರಾಗಲಿದೆ.

ಸತತ ಮಳೆಯಿಂದ ಹಿಂಗಾರು ಬಿತ್ತನೆ ಕಾರ್ಯ ಕೈಗೊಳ್ಳಲು ಹೊಲಗಳನ್ನು ಹದಗೊಳಿಸಲಾಗದೇ ರೈತರು ಕೈಕಟ್ಟಿ ಕುಳಿತಿದ್ದಾರೆ. ಹೊಲಗಳನ್ನು ಹಸನ ಮಾಡಲು ಸಾಧ್ಯವಾಗದೇ ಇರುವುದರಿಂದ ಹಿಂಗಾರು ಬಿತ್ತನೆ ಕುಂಠಿತವಾಗುವ ಆತಂಕ ಸೃಷ್ಟಿಯಾಗಿದೆ.

ಎಕರೆಯೊಂದಕ್ಕೆ 10ರಿಂದ 15 ಸಾವಿರ ರೂ ಖರ್ಚು ಮಾಡಿದ ಹಣವೂ ಕೈಸೇರದಂತಾಗಿ ರೈತರು ಸಾಲದ ಸುಳಿಯಲ್ಲಿ ಸಿಲುಕುವಂತಾಗಿದೆ. ಈಗಾಗಲೇ ಹೆಸರು ಬೆಳೆ ಸಂಪೂರ್ಣ ಹಾಳಾಗಿದ್ದು, ಈಗ ಕಟಾವು ಮಾಡಿ ರಾಶಿ ಮಾಡುವ ಸಂದರ್ಭದಲ್ಲಿ ಉತ್ತರಾ ಮಳೆ ಸತತವಾಗಿ ಸುರಿದಿರುವುದರಿಂದ ಶೇಂಗಾ ಬೇಳೆ ಕೊಳೆತು ನಷ್ಟ ಅನುಭವಿಸುವಂತಾಗಿದೆ ಎಂದು ರೈತ ಮುತ್ತಪ್ಪ ಬಳ್ಳಾರಿ ತಮ್ಮ ಅಳಲು ತೋಡಿಕೊಂಡಿದ್ದಾರೆ.

# ಬೇಡಿಕೆಗಳ ಈಡೇರಿಕೆ ಆಗ್ರಹಿಸಿ ಮನವಿ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಸೋಮವಾರ ಶಿರಹಟ್ಟಿ ತಾಲೂಕಾ ಕುರುಬರ ಸಂಘದ ವತಿಯಿಂದ ಎಸ್‌ಟಿ ಮೀಸಲಾತಿ ಹಾಗೂ ಕುರುಬರ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ತಹಸೀಲ್ದಾರರ ಮೂಲಕ ಸಿಎಂ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಸಂತೋಷ ಕುರಿ, ಸ್ವಾತಂತ್ರ್ಯ ಪೂರ್ವದಿಂದಲೂ ಕುರಿಗಳನ್ನು ಮೇಯಿಸುತ್ತಾ ಅಲೆಮಾರಿ ಜನಾಂಗದಂತೆ ಸುತ್ತಾಡುತ್ತಾ ಜೀವನ ಸಾಗಿಸುತ್ತಾ ಬಂದಿದ್ದು, ಮುಂದಿನ ಪೀಳಿಗೆಗೆ ವಿದ್ಯಾಭ್ಯಾಸದ ಹಾಗೂ ಸಮಾಜದ ಹಿತದೃಷ್ಟಿಯಿಂದ ಯಾವುದೇ ಒತ್ತಡಕ್ಕೆ ಮಣಿಯದೇ ನಮಗೆ ಎಸ್‌ಟಿ ಮೀಸಲಾತಿ ಕಡ್ಡಾಯವಾಗಿ ಕೊಡಬೇಕು. ಕುರುಬರಿಗೆ ಪ್ರತ್ಯೇಕ ನಿಗಮ ಮಂಡಳಿ ಸ್ಥಾಪಿಸಬೇಕು, ಕಾಯ್ದಿಟ್ಟ ಅರಣ್ಯ ಪ್ರದೇಶಗಳಲ್ಲಿ ಕುರಿಗಳನ್ನು ಮೇಯಿಸಲು ಅವಕಾಶ ಕಲ್ಪಿಸಬೇಕು. ಕುರಿಗಳ ಅಕಾಲಿಕ ಮರಣದಿಂದ ಸರಕಾರ ನೀಡುತ್ತಿರುವ ಧನ ಸಹಾಯವನ್ನು ಕುರಿಗಾಹಿಗಳಿಗೆ ನಿಗದಿತ ಸಮಯಕ್ಕೆ ನೀಡಬೇಕು, ಪ್ರತಿ ತಾಲೂಕಿಗೆ ಕನಕ ಭವನ ನಿರ್ಮಾಣ ಮಾಡಬೇಕೆಂದು ಮನವಿಯಲ್ಲಿ ತಿಳಿಸಿದರು.

ರಾಮಣ್ಣ ಕಂಬಳಿ, ಚನ್ನವೀರಪ್ಪ ಸ್ವಾಮಿ, ದೇವಪ್ಪ ಬಜನಿ, ಹೊನ್ನಪ್ಪ ಗೂಳಪ್ಪನವರ, ಬಸಪ್ಪ ಬಸಾಪೂರ, ಸುರೇಶ ಕುರಿ, ಫಕ್ಕೀರೇಶ ಜಿಡಗಣ್ಣವರ, ಲಕ್ಷ್ಮಣ ರೊಟ್ಟಿಗವಾಡ, ಹನುಮಂಪ್ಪ ವಲೀಕಾರ, ಸುರೇಶ ವಾಲೀಕಾರ, ಬಸವರಾಜ ಕಂಬಳಿ, ಮಂಜು ಯರಿಮನಿ, ಫಕ್ಕೀರೇಶ ಡಂಬಳ ಮುಂತಾದವರು ಉಪಸ್ಥಿತರಿದ್ದರು.

# ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಸೆಪ್ಟೆಂಬರ್ 30 ರಂದು ಸಾಯಂಕಾಲ 6 ಗಂಟೆಗೆ ಬಾಗಲಕೋಟಿ ಜಿಲ್ಲೆಯ ಚಿಕ್ಕ ಸಂಗಮ ರಸ್ತೆ ಮೂಲಕ ರಾತ್ರಿ 9 ಗಂಟೆಗೆ ಗದುಗಿಗೆ ಆಗಮಿಸಿ ವಾಸ್ತವ್ಯ ಮಾಡುವರು. ಅಕ್ಟೋಬರ್ 1 ರಂದು ಬೆಳಿಗ್ಗೆ 7.30 ಗಂಟೆಗೆ ಸರಾಫ್ ಬಜಾರದಲ್ಲಿ ಶ್ರೀ ಜಗದಂಬಾ ದೇವಸ್ಥಾನ ಶ್ರೀ ತುಳಜಾ ಭವಾನಿ ದೇವಸ್ಥಾನದ ಶ್ರೀ ದೇವಿ ಅಲಂಕಾರ ಹಾಗೂ ಮಹಾಮಂಗಳಾರುತಿ ಪೂಜಾ ಸಮಾರಂಭದಲ್ಲಿ ಪಾಲ್ಗೊಳ್ಳುವರು. ಬೆಳಿಗ್ಗೆ 11 ಗಂಟೆಗೆ ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆ–2025ರ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಸಂಜೆ 6 ಗಂಟೆಗೆ ರಸ್ತೆ ಮೂಲಕ ಗದುಗಿನಿಂದ ಹೊರಟು ಸಂಜೆ 7 ಗಂಟೆಗೆ ಹುಬ್ಬಳ್ಳಿಗೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

**ಅಡವೀಂದ್ರಸ್ವಾಮಿ ಮಠದಲ್ಲಿ ದಸರಾ ಮಹೋತ್ಸವ, ಶ್ರೀದೇವಿ ಪುರಾಣ ಪ್ರವಚನ**

# ಪುರಾಣ ಶ್ರವಣದಿಂದ ಮೋಕ್ಷ ಪ್ರಾಪ್ತಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀದೇವಿ ಪುರಾಣ ಕೇಳುವುದರಿಂದ ಮೋಕ್ಷ ಪ್ರಾಪ್ತಿಯಾಗುತ್ತದೆ. ಮನೆಯಲ್ಲಿ ಸಿರಿ–ಸಂಪತ್ತು ಅಧಿಕವಾಗುತ್ತದೆ. ಜೀವನದಲ್ಲಿ ನೀತಿ, ಧರ್ಮ, ಆಚಾರ, ವಿಚಾರದಿಂದ ನಡೆಯದಿದ್ದರೆ ಕಷ್ಟ ಬರುತ್ತದೆ. ಪರಮಾತ್ಮನ ಚಿಂತನೆ ಮಾಡಿದರೆ ಮುಕ್ತಿ ದೊರೆಯುತ್ತದೆ ಎಂದು ದತ್ತಾ ಪ್ರಾಪರ್ಟಿಸ್ ನಿರ್ದೇಶಕ ಶಂಕರಗೌಡ ಹ.ಶಿವನಗೌಡ್ರ ಹೇಳಿದರು.




ನಗರದ ಮುಳಗುಂದನಾಕಾ ಬಳಿಯ ಶ್ರೀಅಡವೀಂದ್ರಸ್ವಾಮಿ ಮಠದಲ್ಲಿ ದಸರಾ ಮಹೋತ್ಸವ ಮತ್ತು ಶ್ರೀದೇವಿ ಪುರಾಣ ಪ್ರವಚನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಎಸ್.ಎಚ್. ಶಿವನಗೌಡ್ರ ಮಾತನಾಡಿ, ಮನುಕುಲದ ಸರ್ವಾಂಗೀಣ ಏಳ್ಗೆಗಾಗಿ ಶ್ರೀದೇವಿ ಆರಾಧನೆ ಮುಖ್ಯವಾಗಿದೆ. ಹೀಗಾಗಿ ಪೂರ್ವಜರು ಪರಂಪರಾಗತವಾಗಿ ಶ್ರೀದೇವಿ ಆರಾಧನೆ, ದೇವಿ ಪೂಜಾ ಕಾರ್ಯಗಳನ್ನು ನೆರವೇರಿಸಿಕೊಂಡು ಬರುತ್ತಿದ್ದಾರೆ. ಇಂತಹ ಸಂಸ್ಕೃತಿ ಮುಂದಿನ ಪೀಳಿಗೆಗೂ ಮುಂದುವರೆದುಕೊಂಡು ಸಾಗಬೇಕು ಎಂದು ಹೇಳಿದರು.


ಮುಖ್ಯ ಅತಿಥಿಗಳಾಗಿ ಸುವಾ ಶಿವನಗೌಡ್ರ, ಗಣ್ಯ ವ್ಯಾಪಾರಸ್ಥರಾದ ಶೈಲೇಂದ್ರಕುಮಾರ ಶಹಾ, ದೀಪ್ತಿ ಶಹಾ, ಡಾ. ಶಶಿಕಾಂತ ಡಿ.ಹಿರೇಮಠ, ಡಾ. ಸ್ಪರ್ಷಾ ಶಶಿಕಾಂತ ಹಿರೇಮಠ ಪಾಲ್ಗೊಂಡಿದ್ದರು. ಶ್ರೀಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಸಮಿತಿಯ ಗೌರವಾಧ್ಯಕ್ಷ ಎಸ್.ಪಿ. ಸಂಶಿಮಠ, ಅಧ್ಯಕ್ಷ ಸದಾಶಿವಯ್ಯ ಮದರಿಮಠ, ಪ್ರಧಾನ ಕಾರ್ಯದರ್ಶಿ ಶರಣಬಸಪ್ಪ ಗುಡಿಮನಿ, ಮಹಿಳಾ ಸಮಿತಿ ಅಧ್ಯಕ್ಷರಾದ ಸುವರ್ಣಾ ಮದರಿಮಠ ಮುಂತಾದ ಗಣ್ಯರು ವೇದಿಕೆಯಲ್ಲಿದ್ದರು.

> ಸಮ್ಮುಖ ವಹಿಸಿದ್ದ ಶ್ರೀಮಠದ ಧರ್ಮದರ್ಶಿಗಳಾದ ಮಹೇಶ್ವರ ಸ್ವಾಮೀಜಿ ಮಾತನಾಡಿ, ದುಷ್ಟರಿಗೆ ಶಿಕ್ಷೆ, ಶಿಷ್ಟರ ಪರಿಪಾಲನೆಗೈಯುವ ಶಕ್ತಿ ಸ್ವರೂಪಳಾದ ಮಾತಾ ದುರ್ಗಾದೇವಿಯ ಆರಾಧನೆಯ ಹಬ್ಬವೇ ನವರಾತ್ರಿ. ಈ ಹಬ್ಬದಲ್ಲಿ ದೇವಿಯನ್ನು ಶಕ್ತಿಯ ನಾನಾ ರೂಪದಲ್ಲಿ ಆರಾಧಿಸಲಾಗುತ್ತದೆ. ದೇವಿ ಮಹಿಷಾಸುರನನ್ನು ವಧೆಗೈದಿದ್ದು, ದುಷ್ಟಗುಣಗಳನ್ನು ದೂರ ಮಾಡಿ ಸಾತ್ವಿಕತೆ ರೂಢಿಸಿಕೊಳ್ಳಬೇಕು ಎಂಬ ಸಂಕೇತ ನೀಡುತ್ತದೆ ಎಂದು ಹೇಳಿದರು.

ಡಾ. ರಾಜಗುರು ಗುರುಸ್ವಾಮಿ ಕಲಕೇರಿ ಅವರಿಂದ ಪುರಾಣ ಪ್ರವಚನ ನಡೆಯಿತು. ಚನ್ನಬಸಯ್ಯ ಶಾಸ್ತ್ರಿಗಳು ಹೇಮಗಿರಿಮಠ ಪುರಾಣ ಪಠಿಸಿದರು. ಪಕ್ರುಸಾಬ ಮುಲ್ಲಾ, ಜಗನ್ನಾಥ ಕಲಬುರಗಿ, ಶರಣಕುಮಾರ ಗುತ್ತರಗಿ, ಎಸ್.ಬಿ. ಭಜಂತ್ರಿ ಸಂಗೀತ ಸೇವೆ ನೀಡಿದರು.

ಪೂಜಾ ಸಮಿತಿ ಅಧ್ಯಕ್ಷರಾದ ಶರಣಯ್ಯಸ್ವಾಮಿ ಶಿವಪ್ಪಯ್ಯನಮಠ, ವೀರೇಶ್ವರ ಸ್ವಾಮಿಗಳು ಹೊಸಳ್ಳಿಮಠ, ಜಾತ್ರಾ ಮಹೋತ್ಸವ ಸಮಿತಿ ಕಾರ್ಯದರ್ಶಿ ಗೀತಾ ಎಂ.ಹೂಗಾರ, ಸಹ ಕಾರ್ಯದರ್ಶಿ ಸುಷ್ಮಾ ಖಂಡಪ್ಪಗೌಡ್ರ, ಕೋಶಾಧ್ಯಕ್ಷರಾದ ಅಶ್ವಿನಿ ನೀಲಗುಂದ, ವಿ.ಎಚ್. ದೇಸಾಯಿಗೌಡ್ರ ಮತ್ತಿತರ ಗಣ್ಯರು ಉಪಸ್ಥಿತರಿದ್ದರು. ಬಿ.ಬಿ. ತೆ–ಣೀಟಗೇರ ಸ್ವಾಗತಿಸಿದರು. ವಿ.ಎಂ. ಕುಂದ್ರಾಳಹಿರೇಮಠ ನಿರೂಪಿಸಿದರು. ಉಮಾಪತಿ ಭೂಸನೂರಮಠ ವಂದಿಸಿದರು

# ಶ್ರೀ ವೆಂಕಟೇಶ್ವರ ದೇವಸ್ಥಾನದಲ್ಲಿ ಶರನ್ನವರಾತ್ರಿ ಉತ್ಸವ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಹಿರೇಬಣದಲ್ಲಿರುವ ಶ್ರೀ ವೆಂಕಟೇಶ್ವರ ಭವ್ಯ ದೇವಸ್ಥಾನದಲ್ಲಿ ಶರನ್ನವರಾತ್ರಿ ಉತ್ಸವ ಕಾರ್ಯಕ್ರಮಗಳು ಸೆ.22ರಿಂದ ಪ್ರಾರಂಭವಾಗಿದ್ದು, ಅಕ್ಟೋಬರ್ 2ರವರೆಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ.

11 ದಿನಗಳ ಕಾಲ ನಿತ್ಯ ಬೆಳಿಗ್ಗೆ 6ಕ್ಕೆ ಉದಯರಾಗ, ಬೆಳಿಗ್ಗೆ 7.30ಕ್ಕೆ ಅಷ್ಟೋತ್ತರ, ಬೆಳಗ್ಗೆ 8.30ಕ್ಕೆ ಪಂಚಮೃತಾಭಿಷೇಕ, ಸಂಜೆ 5ರಿಂದ 6ರವರೆಗೆ ಧರ್ಮದರ್ಶಿಗಳು ಹಾಗೂ ಪ್ರಧಾನ ಅರ್ಚಕರಾಗಿರುವ ವೆಂಕಟೇಶ ಗುಡಿ ಅವರಿಂದ ಶ್ರೀನಿವಾಸ ಕಲ್ಯಾಣ ಪುರಾಣ, ಸಂಜೆ 7.30 ವಾಹನೋತ್ಸವ, ಅಷ್ಟಾವಧಾನ, ಮಹಾಮಂಗಳಾರತಿ ನಡೆಯುತ್ತಿವೆ.

ಅ.2ರಂದು ಮಧ್ವಾಚಾರ್ಯರ ಜಯಂತಿ ಪ್ರಯುಕ್ತ ಬೆಳಿಗ್ಗೆ 7.30ಕ್ಕೆ ಮಧ್ವಾಚಾರ್ಯರ ಭಾವಚಿತ್ರ ಮೆರವಣಿಗೆ, ವಿಜಯದಶಮಿ ಪ್ರಯುಕ್ತ ಮುಂಜಾನೆ 10.30ಕ್ಕೆ ರಥೋತ್ಸವ, ಅಷ್ಟಾವಧಾನ, ಮಹಾಮಂಗಳಾರತಿ ಜರುಗಲಿದೆ. ಸಾಯಂಕಾಲ 5ಕ್ಕೆ ಸೀಮೋಲ್ಲಂಘನ (ಬನ್ನಿ ಮುಡಿಯುವ) ಕಾರ್ಯಕ್ರಮ ಜರುಗಲಿದ್ದು, ಸಾರ್ವಜನಿಕರು ಪಾಲ್ಗೊಳ್ಳುವಂತೆ ವೆಂಕಟೇಶ್ವರ ದೇವಸ್ಥಾನದ ಧರ್ಮದರ್ಶಿಗಳು ಹಾಗೂ ಪ್ರಧಾನ ಅರ್ಚಕ ವೆಂಕಟೇಶ ಗುಡಿ ಮನವಿ ಮಾಡಿದ್ದಾರೆ.

# ಅವಿರೋಧ ಆಯ್ಕೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಕೃಷಿ ಉತ್ಪನ್ನ ಮಾರಾಟ ಸಹಕಾರ ಸಂಘಕ್ಕೆ ಭಾನುವಾರ ನಡೆದ ಚುನಾವಣೆಯಲ್ಲಿ 9 ಸದಸ್ಯರು ಅವಿರೋಧವಾಗಿ ಆಯ್ಕೆಯಾಗಿದ್ದು, ಕೃಷಿ ಪತ್ತಿನ ಸಂಘದ 5 ಸ್ಥಾನಗಳಿಗೆ ಮತದಾನ ನಡೆದಿದೆ ಎಂದು ಚುನಾವಣಾ ಅಧಿಕಾರಿ ಪ್ರಶಾಂತ ಮುಧೋಳ ತಿಳಿಸಿದ್ದಾರೆ.

ಸಾಮಾನ್ಯ ವರ್ಗ–ಸೋಮೇಶ ಉಪನಾಳ, ಮಹೇಶ ಹೊಗೆಸೊಪ್ಪಿನ, ಶಂಕ್ರಪ್ಪ ದೇಸಾಯಿ, ಪರಿಶಿಷ್ಟ ಪಂಗಡ–ಸುರೇಶ ಬಂಕಾಪುರ, ಪರಿಶಿಷ್ಟ ಜಾತಿ–ಜಯಕ್ಕ ಕಳ್ಳಿ, ಅ ವರ್ಗ–ವಿರೂಪಾಕ್ಷಪ್ಪ ಪಡಗೇರಿ, ಬ ವರ್ಗ–ಈರಣ್ಣ ಮುಳಗುಂದ, ಮಹಿಳಾ ಸದಸ್ಯರು–ರತ್ನವ್ವ ಗುಂಜಳ, ಮೇಘಾ ಪಾಟೀಲ ಅವರು ಆಯ್ಕೆಯಾಗಿದ್ದಾರೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಶನಿವಾರ ರೋಣ ಪಟ್ಟಣದ ಹೊಳೆಆಲೂರ ರಸ್ತೆಯಲ್ಲಿ ಟಾಟಾ ಏಸ್ ವಾಹನದಲ್ಲಿ ಅಕ್ರಮವಾಗಿ ಅನ್ನಭಾಗ್ಯ ಯೋಜನೆಯ ಅಕ್ಕಿ ಮತ್ತು ಜೋಳವನ್ನು ಸಾಗಾಟ ಮಾಡುತ್ತಿದ್ದ ಸಂದರ್ಭದಲ್ಲಿ ಆಹಾರ ಇಲಾಖೆಯ ಸಿಬ್ಬಂದಿಗಳು ಮತ್ತು ಪೊಲೀಸರು ದಾಳಿ ಮಾಡಿ 33 ಸಾವಿರ ರೂ ಮೌಲ್ಯದ 10 ಕ್ವಿಂಟಲ್ ಅಕ್ಕಿ, 2 ಸಾವಿರ ಮೌಲ್ಯದ ಜೋಳವನ್ನು ವಾಹನದೊಂದಿಗೆ ವಶಪಡಿಸಿಕೊಂಡಿದ್ದು, ಚಾಲಕನನ್ನು ಬಂಧಿಸಲಾಗಿದೆ. ಈ ಕುರಿತು ರೋಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka